# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 49 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 04–09–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 49 | Title- Code: KARKAN 28269 | Chitradurga | Date: 04-09-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಪತ್ರಿಕಾ ವಿತರಕರ 4ನೇ ರಾಜ್ಯ ಮಟ್ಟದ ಸಮ್ಮೇಳನ 8ಕ್ಕೆ 2
ರಾಷ್ಟ್ರೀಯ ಹೆದ್ದಾರಿ ಸರ್ವೀಸ್ ರಸ್ತೆ ಪೂರ್ಣಗೊಳಿಸಲು ಸೂಚನೆ 3
ರೈಲ್ವೆ ಹಳಿಗಳ ಮೇಲೆ ಇತರೆ ವಸ್ತು ಇಡುವುದು, ಕಲ್ಲೆಸೆಯುವುದು ಅಪರಾಧ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಬುಡಕಟ್ಟು ಸಮುದಾಯದ ಗೌರಸಮುದ್ರ ಶ್ರೀಮಾರಮ್ಮದೇವಿ ಜಾತ್ರೆಯಲ್ಲಿ ಭಕ್ತಸಾಗರ

## ಎಲ್ಲೆಡೆ ಭಕ್ತರ ಜಯಘೋಷ –ಎತ್ತಿನಗಾಡಿಯಲ್ಲಿ ಬಂದ ಭಕ್ತರು –ತಾಲ್ಲೂಕು ಆಡಳಿತದಿಂದ ಸಮರ್ಪಕ ವ್ಯವಸ್ಥೆ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಮಧ್ಯ ಕರ್ನಾಟಕದ ಚಿತ್ರದುರ್ಗ ಜಿಲ್ಲೆಯ ಪ್ರಸಿದ್ಧ ಜಾತ್ರೆಗಳಲ್ಲಿ ಒಂದಾದ ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಮಾರಮ್ಮದೇವಿ ಜಾತ್ರೆ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಭಕ್ತಿ, ಶ್ರದ್ಧೆಯಿಂದ ಅದ್ದೂರಿಯಾಗಿ ಆಚರಿಸಲಾಯಿತು.



ಮಾರಮ್ಮದೇವಿ ದೇವಸ್ಥಾನ ಹಾಗೂ ತುಮಲ ಪ್ರದೇಶದ ಸುತ್ತಮುತ್ತಲು ಭಕ್ತರು ದಂಡೇ ಹರಿದುಬಂದಿತ್ತು. ಜಿಲ್ಲಾಡಳಿತದ ಸೂಚನೆ ಮೇರೆಗೆ ತಾಲ್ಲೂಕು ಆಡಳಿತ ಹಲವಾರು ಸುಧಾರಣಾ ಕ್ರಮಗಳನ್ನು ಕೈಗೊಂಡು ಭಕ್ತರಿಗೆ ತೊಂದರೆಯಾಗದಂತೆ ಎಚ್ಚರಿಕೆವಹಿಸಿದ್ದರಲ್ಲದೆ, ಸಿದ್ಧತೆಗಳನ್ನು ಸಹ ಪೂರ್ಣಗೊಳಿಸಿದ್ದರು. ಕಳೆದ ಹಲವಾರು ದಶಕಗಳಿಂದ ಈ ಭಾಗದಲ್ಲಿ ನೆಲೆಸಿರುವ ಲಕ್ಷಾಂತರ ಭಕ್ತರ ಆರಾಧ್ಯದೈವವಾದ ಸಂಕಷ್ಟಗಳಿಗೆ ಪರಿಹಾರ ನೀಡುವ ಮಾರಮ್ಮ ದೇವಿ ದರ್ಶನ ಪಡೆದು ಭಕ್ತರು ಪುನಿತರಾದರು. ತಮ್ಮ ಆರಾಧ್ಯದೈವವನ್ನು ಕಣ್ತುಂಬಿಕೊಂಡರು.

ರಾಜ್ಯದ ಕೆಲವೇ ಜಿಲ್ಲೆಗಳಲ್ಲಿ ನಡೆಯುವ ಮೂಲ ಬುಡಕಟ್ಟು ಸಂಸ್ಕೃತಿಕ ಜಾತ್ರೆಗಳಲ್ಲಿ ಒಂದಾದ ಮಾರಮ್ಮ ದೇವಿ ಜಾತ್ರೆ ಆಂಧ್ರಪ್ರದೇಶಕ್ಕೆ ಹೊಂದಿಕೊಂಡಿರುವ ರಾಜ್ಯದ ಗಡಿಭಾಗದಲ್ಲಿದ್ದು, ಆಂಧ್ರವೂ ಸೇರಿದಂತೆ ಗುಲ್ಬರ್ಗ, ಸುರಪುರ, ಬಳ್ಳಾರಿ ಹಲವಾರು ಜಿಲ್ಲೆಗಳಿಂದ ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದರು. ಪ್ರತಿವರ್ಷವೂ ಈ ಜಾತ್ರೆಗೆ ಹರಿಕೆ ಹೊತ್ತ ಮೂಲ ಭಕ್ತರು ಎತ್ತಿನ ಗಾಡಿಗಳಲ್ಲಿ ಆಗಮಿಸಿ ಜಾತ್ರೆಯಲ್ಲಿ ಪಾಲ್ಗೊಂಡು ತಮ್ಮ ಹರಿಕೆ ತೀರಿಸಿದರು. ಮಂಗಳವಾರ ಬೆಳಗಿನಜಾವೇ ಭಕ್ತರು ದೇವಸ್ಥಾನಕ್ಕೆ ಆಗಮಿಸಿ ಇಷ್ಟಾರ್ಥಗಳನ್ನು ಪೂರೈಸಿದರು.

ಪ್ರತಿವರ್ಷದಂತೆ ಮಧ್ಯಾಹ್ನ ದೇವಸ್ಥಾನದಿಂದ ತುಮಲು ಪ್ರದೇಶಕ್ಕೆ ಮಾರಮ್ಮ ದೇವಿಯ ಪೆಟ್ಟಿಗೆಯಲ್ಲಿ ಕೂಡಿಸಿ ಮಂಗಳವಾದ್ಯದೊಂದಿಗೆ ಭವ್ಯವಾದ ಮೆರವಣಿಗೆ ಮೂಲಕ ತುಮಲು ಪ್ರದೇಶಕ್ಕೆ ಕರೆತರಲಾಯಿತು. ಬುಡಕಟ್ಟು ಸಂಪ್ರದಾಯದಂತೆ ಡೊಳ್ಳು, ಕೋಲಾಟ, ಕುಣಿತ, ಬರಿಮೈಗೆ ಚಾಟಿಯಲ್ಲಿ ಹೊಡೆದುಕೊಳ್ಳುವ ಮೂಲಕ ಭಕ್ತಿಯನ್ನು ಪ್ರದರ್ಶಿಸಿದರು. ಈ ಸಂದರ್ಭದಲ್ಲಿ ಗ್ರಾಮದಿಂದ ತುಮಲು ಪ್ರದೇಶವರೆಗೂ ಸುಮಾರು ಮೂರು ಕಿ.ಮೀ ದೂರದ ರಸ್ತೆಯ ಇಕ್ಕಲಗಳಲ್ಲಿ ಲಕ್ಷಾಂತರ ಭಕ್ತರು ಕೈಮುಗಿದು ತಾವು ಬೆಳೆದ ಬೆಳೆಗಳು, ಈರುಳ್ಳಿ, ಕೋಳಿ, ಹೂ ತೂರುವ ಮೂಲಕ ಹರಿಕೆ ತೀರಿಸಿದರು. ನಂತರ ತುಮಲು ಪ್ರದೇಶಕ್ಕೆ ಆಗಮಿಸಿ ಇಲ್ಲಿ ಹಾಲಿ ಇರುವ ಮೂಲ ದೇವಸ್ಥಾನದ ಸುತ್ತಲು ಸುತ್ತಿದ ನಂತರ ದೇವಿಯನ್ನು ಅಲ್ಲಿ ಪ್ರತಿಷ್ಠಾಪಿಸಿ ಪೂಜೆ ಕಾರ್ಯಗಳನ್ನು ನಡೆಸಲಾಯಿತು.

ಪ್ರತಿವರ್ಷದ ವಾಡಿಕೆಯಂತೆ ದೇವಸ್ಥಾನದ ಮುಂದಿರುವ ಗರಡು ಗಂಭದ ಮೇಲೆ ದೀಪ ಹಚ್ಚಿದ ನಂತರ ಜಾತ್ರೆ ಸಂಪನ್ನವಾಯಿತು. ಕಂಬ ಏರಿ ದೀಪ ಹಚ್ಚುವ ದೃಶ್ಯವನ್ನು ನೆರೆದಿದ್ದ ಭಕ್ತರು ಕಣ್ತುಂಬಿಕೊಂಡು ದೀಪಹಚ್ಚಿ ವಾಪಾಸ್ ಮರಳುವಾಗ ಎಲ್ಲರೂ ಒಟ್ಟಿಗೆ ದೇವಿಗೆ ಜೈಯಕಾರ ಹಾಕಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದ ಗೋವಿಂದಎಂ.ಕಾರಜೋಳ,ಮಾಜಿಸಚಿವ ಬಿ.ಶ್ರೀರಾಮುಲು, ಬಿಜೆಪಿ ಮುಖಂಡರಾದ ಬಾಳೆಮಂಡಿರಾಮದಾಸ್, ಈ.ರಾಮರೆಡ್ಡಿ, ಎನ್.ಓಬಳೇಶ್, ಚನ್ನಗಾನಹಳ್ಳಿ ಮಲ್ಲೇಶ್, ಪ್ರಕಾಶ್‌ರೆಡ್ಡಿ, ನಾರಾಯಣರೆಡ್ಡಿ, ಪಾಪಣ್ಣ, ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ, ಚಳ್ಳಕೆರೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಜಿ.ಎಸ್.ಮಂಜುನಾಥ, ಡಾ.ಬಿ.ಯೋಗೇಶ್‌ಬಾಬು, ಎಸ್ಪಿ ರಂಜಿತ್‌ಕುಮಾರ್ ಬಂಡಾರು, ಎಸಿ ಎಂ.ಕಾರ್ತಿಕ್, ತಹಶೀಲ್ದಾರ್ ರೇಹಾನ್ ಪಾಷ, ಇಒ ಎಚ್.ಶಶಿಧರ, ಡಿವೈಎಸ್ಪಿ ಟಿ.ಬಿ.ರಾಜಣ್ಣ, ದಿವಾಕರ್, ಇನ್ಸ್‌ಪೆಕ್ಟರ್ ಎನ್.ತಿಮ್ಮಣ್ಣ, ರಾಜಫಕ್ರುದ್ದೀನ್‌ದೇಸಾಯಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ ಸೇರಿದಂತೆ ಹಲವಾರು ಮುಖಂಡರು ಜಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಸಂಚಾರಿ ವ್ಯವಸ್ಥೆಗೆ ತೊಂದರೆಯಾಗದಂತೆ ಪೊಲೀಸ್ ಇಲಾಖೆ ಜಾಗ್ರತೆ ವಹಿಸಿದ್ದರು. ಜಾತ್ರೆಯಲ್ಲಿ ಪಿಕ್‌ಪಾಕೇಟ್ ಪ್ರಕರಣ ನಿಯಂತ್ರಿಸಲು ಪೊಲೀಸರು ಶ್ರಮವಹಿಸಿದರು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಎಇಇ ದಯಾನಂದಸ್ವಾಮಿ, ಪಂಚಾಯಿತಿ ಇಂಜಿನಿಯರಿಂಗ್ ವಿಭಾಗದ ಕಾವ್ಯ, ಲೋಕೋಪಯೋಗಿ ವಿಭಾಗದ ಎಇಇ ವಿಜಯಭಾಸ್ಕರ್ ರಸ್ತೆ, ಕುಡಿಯುವ ನೀರು ವಿಭಾಗದಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿದ್ದರು. ಗ್ರಾಮ ಪಂಚಾಯಿತಿ ಸ್ವಚ್ಛತಾ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತು. ಆರೋಗ್ಯ ಇಲಾಖೆ ಅಧಿಕಾರಿ ಎನ್.ಕಾಶಿ, ಸಿಬ್ಬಂದಿ ವರ್ಗ ಸ್ಥಳದಲ್ಲೇ ಮೊಕ್ಕಾಂ ಮಾಡಿ ಯಾವುದೇ ರೋಗ ವ್ಯಾಪಿಸದಂತೆ ಕ್ರಮ ಕೈಗೊಂಡರು.







## ಫಾಸ್ಟ್ ನ್ಯೂಸ್

### ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ: ಅರ್ಹ ವ್ಯಕ್ತಿಗಳಿಂದ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024–25ನೇ ಸಾಲಿನಲ್ಲಿ 2024ರ ಅಕ್ಟೋಬರ್ 17ರಂದು ನಡೆಯಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಂದು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ರಾಜ್ಯ ಮಟ್ಟದಲ್ಲಿ ಪರಿಶಿಷ್ಟ ವರ್ಗದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ಅರ್ಹ ವ್ಯಕ್ತಿಗಳಿಗೆ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಸೆ.18 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಹ ವ್ಯಕ್ತಿಗಳು ತಮ್ಮ ಪೂರ್ಣ ದಾಖಲಾತಿಗಳೊಂದಿಗೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳವರ ಕಛೇರಿ, ಜೆ.ಸಿ.ಆರ್. ಬಡಾವಣೆ, 4ನೇ ಕ್ರಾಸ್ (ಪೂರ್ವ),ಗಣೇಶ ದೇವಸ್ಥಾನದ ಹತ್ತಿರ, ಚಿತ್ರದುರ್ಗ ಹಾಗೂ ಆಯಾ ತಾಲ್ಲೂಕಿನ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಮತ್ತು ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆಯಲ್ಲಿ ಅರ್ಜಿಗಳನ್ನು ಪಡೆದು ಮಾಹಿತಿಯೊಂದಿಗೆ ಭರ್ತಿ ಮಾಡಿ ಇದೇ ಸೆಪ್ಟೆಂಬರ್ 18ರಂದು ಸಂಜೆ 5.30ರೊಳಗಾಗಿ ಆಯಾ ತಾಲ್ಲೂಕಿನ ಕಚೇರಿಯಲ್ಲಿ ಸಲ್ಲಿಸಬೇಕು. ಷರತ್ತುಗಳು: ಅರ್ಜಿದಾರರ ವಯಸ್ಸು ಕನಿಷ್ಟ 35 ವರ್ಷದವರಾಗಿರಬೇಕು. ಪ್ರಶಸ್ತಿಗೆ ಅರ್ಜಿ ಸಲ್ಲಿಸಿರುವ ವ್ಯಕ್ತಿಯು ಯಾವುದೇ ಕಾನೂನು ಬಾಹಿರ ಚಟುವಟಿಕೆಯಲ್ಲಿ ತೊಡಗಿರತಕ್ಕದ್ದು. ಅರ್ಜಿದಾರರು ಪರಿಶಿಷ್ಟ ವರ್ಗದ ಜನಾಂಗದ ಏಳಿಗೆಗಾಗಿ ಶ್ರಮಿಸಿರುವ ಬಗ್ಗೆ ವೈಯಕ್ತಿಕ ವಿವರಗಳೊಂದಿಗೆ ದಾಖಲೆಗಳ ಸಹಿತ ಅರ್ಜಿ ಸಲ್ಲಿಸುವುದು. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

### ಯಾತ್ರಿ ನಿವಾಸ: ಹಸ್ತಾಂತರಕ್ಕೆ ಅರ್ಜಿ

» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕಿನ ಹನುಮನಕಟ್ಟೆ ಕೆಂಚಾಂಬ ದೇವಸ್ಥಾನದ ಬಳಿ, ಸಾಸಲು ಭೂತಪ್ಪ ದೇವಸ್ಥಾನದ ಬಳಿ ಹಾಗೂ ದುಮ್ಮಿಗೊಲ್ಲರಹಟ್ಟಿ ಶ್ರೀ ಜುಂಜಪ್ಪ ದೇವಸ್ಥಾನದ ಬಳಿ ಯಾತ್ರಿನಿವಾಸಗಳನ್ನು ನಿರ್ಮಿಸಲಾಗಿದ್ದು, ಪ್ರತಿ ಯಾತ್ರಿ ನಿವಾಸಕ್ಕೆ ತಲಾ ರೂ.25 ಲಕ್ಷ ವೆಚ್ಚ ಭರಿಸಲಾಗಿರುತ್ತದೆ. ಈ ಕಟ್ಟಡಗಳನ್ನು ಯಾವುದಾದರು ಸಂಸ್ಥೆಗಳು ಹಸ್ತಾಂತರಿಸಿಕೊಳ್ಳಲು ಇಚ್ಛಿಸಿದ್ದಲ್ಲಿ ಪ್ರವಾಸೋದ್ಯಮ ಇಲಾಖೆಗೆ "ಆಸಕ್ತಿಯ ಅಭಿವ್ಯಕ್ತ " Expenses of interest (EOI) ನ ಸೆಪ್ಟೆಂಬರ್ 10ರೊಳಗಾಗಿ ಅರ್ಜಿ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ನಗರದ ಕಾಮನಬಾವಿ ಬಡಾವಣೆಯ ಕೋಟೆ ಸಮೀಪದ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಎಬಿವಿಪಿ ಸಮ್ಮೇಳನ

» **ಚಿತ್ರದುರ್ಗ**

ವಿಶ್ವದಲ್ಲಿ ಅತಿ ದೊಡ್ಡ ಸಂಘಟನೆಯಾದ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಪ್ರತಿ ವರ್ಷದಂತೆ ಈ ವರ್ಷವೂ ಚಿತ್ರದುರ್ಗ ಜಿಲ್ಲಾ ಘಟಕ ವತಿಯಿಂದ ನಗರ ಸಮ್ಮೇಳನವನ್ನು ಅಮೃತ್ ಆಯುರ್ವೇದಿಕ್ ಕಾಲೇಜ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಕಾಲೇಜಿನ ಉಪ ಪ್ರಾಂಶುಪಾಲರಾದಂತಹ ಡಾ. ಜಯಶ್ರೀ ಹಾಗೂ ಎಬಿವಿಪಿ ಜಿಲ್ಲಾ ಪ್ರಮುಖರಾದಂತ ಡಾ.ಎಸ್‌ಆರ್ ಲೇಪಾಕ್ಷ ಹಾಗೂ ನಗರ ಉಪಾಧ್ಯಕ್ಷರು ಡಾ. ರವಿ ಕರ್ನಾಟಕ ದಕ್ಷಿಣ ಪ್ರಾಂತ ರಾಜ್ಯ ಕಾರ್ಯದರ್ಶಿ ಪ್ರವೀಣ್ ಎಚ್ ಕೆ. ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ಗೆ ನೂತನ ನಗರ ಕಾರ್ಯದರ್ಶಿಯಾಗಿ ಕನಕರಾಜ್ ಕೋಡಿಹಳ್ಳಿ,ಸಹಕಾರ್ಯದರ್ಶಿಯಾಗಿ ಸಂಜಯ್ ಹಾಗೂ ಇತರ ಕಾರ್ಯಕರ್ತರನ್ನು ಘೋಷಿಸಲಾಯಿತು.

**ಪ್ರಮುಖ ಸುದ್ದಿ**

# ಸಾವೆ ಬೆಲೆ ಕುಸಿತ ಖಂಡಿಸಿ ರೈತರ ಪ್ರತಿಭಟನೆ

» **ಹೊಸದುರ್ಗ**

ತಾಲ್ಲೂಕಿನಾದ್ಯಂತ ಅತಿ ಹೆಚ್ಚು ಸಾವೆ ಬೆಳೆಯಲಾಗಿತ್ತು. ಸಾವೆ ಬೆಲೆ ದಿನದಿಂದ ದಿನಕ್ಕೆ ಕುಸಿಯುತ್ತಲೇ ಬಂದಿದೆ. ಸೋಮವಾರ ದಿಢೀರ್ ಬೆಲೆ ಕುಸಿದಿದ್ದು, ಇದನ್ನು ಖಂಡಿಸಿ ರೈತರು ಎಪಿಎಂಸಿ ಎದುರು ಧರಣಿ ನಡೆಸಿದರು.



ಮಧ್ಯಾಹ್ನ 3 ಕ್ಕೆ ಖರೀದಿದಾರರು ಆಗಮಿಸಿದರು. ಅವರ ಖರೀದಿ ಮಿತಿ 2000 ಕ್ವಿಂಟಾಲ್ ಮಾತ್ರ ಇದೆ. ಸೋಮವಾರ ಸುಮಾರು 4 ರಿಂದ 6 ಸಾವಿರ ಕ್ವಿಂಟಲ್ ಸಾವೆ ಬಂದಿದೆ. ಕಳೆದ ವರ್ಷ ಕ್ವಿಂಟಾಲ್ ಗೆ □4200, 15 ದಿನಗಳ ಹಿಂದೆ □3800, ವಾರದ ಹಿಂದೆ □3100 ಇತ್ತು. ಸೋಮವಾರ ಕ್ವಿಂಟಾಲ್ ಸಾವೆಗೆ □2600 ಆಗಿದೆ. ಇದರಿಂದ ಬೇಸತ್ತ ರೈತರು ಎಪಿಎಂಸಿ ಎದುರು ಧರಣಿ ನಡೆಸಿ, ಅಧಿಕಾರಿಗಳ ಬಳಿಯೂ ಚರ್ಚಿಸಿದರು.

ಈ ಬಾರಿ ಸುಮಾರು 24 ಸಾವಿರ ಹೆ. ನಲ್ಲಿ ಸಾವೆ ಬಿತ್ತನೆಯಾಗಿದ್ದು, ರಾಜ್ಯದ ಗಮನ ಸೆಳೆದಿದೆ ಹೊಸದುರ್ಗ. ಸಾವೆ ಬಿತ್ತನೆ ಸಮಯದಲ್ಲಿ ಹದ ಮಳೆಯಾಗಿತ್ತು. ಆದರೆ ಕಟಾವಿಗೆ ಬಂದಾಗ ಒಂದೇ ಸಮನೆ ಮಳೆಯಾಗಿದೆ. ಇದರಿಂದ ಸಾವೆ ಬೆಳೆ ನೆಲಕ್ಕುರುಳಿದ್ದು, ರೈತರು ನಷ್ಟ ಅನುಭವಿಸಿದರು. ಶೇ. 30 ಕ್ಕೂ ಅಧಿಕ ಇಳುವರಿ ಕುಂಠಿತವಾಗಿದೆ. ಈಗಿರುವ ಬೆಳೆಯಲ್ಲೇ ಸ್ವಲ್ಪ ಆದಾಯ ನೋಡೋಣವೆಂದರೇ, ಬೆಲೆಯಲ್ಲಿ ಏರಿಳಿತ.

ರೈತರು ನಿತ್ಯವೂ ಸಂಕಷ್ಟ ಎದುರಿಸುವಂತಹ ದುಸ್ಥಿತಿ ಎದುರಾಗಿದೆ.

ದಲ್ಲಾಳಿಗಳ ಹಾವಳಿ ಅಧಿಕವಾಗಿದೆ. ತೋಚಿದ ಬೆಲೆ ನಿಗದಿ ಮಾಡುತ್ತಿದ್ದಾರೆ. ಒಂದು ಕ್ವಿಂಟಾಲ್ ಸಾವೆ ಬೆಳೆಗೆ ಸುಮಾರು □3000 ವ್ಯಯಿಸಬೇಕು. ರೈತರಿಗೆ ಲಾಭ ಇರಲಿ, ವ್ಯಯಿಸಿದ ಹಣವಾದರೂ ವಾಪಸ್ಸು ಸಿಗಬೇಕು. 13 ಎಕರೆಯಲ್ಲಿ ಸಾವೆ ಬಿತ್ತನೆ ಮಾಡಿದ್ದು, ಸದ್ಯ 25 ಕ್ವಿಂಟಾಲ್ ಮಾರಾಟ ಮಾಡಲು ಎಪಿಎಂಸಿ ಗೆ ಬಂದಿದ್ದೇವೆ. ಮಳೆಯಿಂದಾಗಿ ಮೇವು ದೊರೆಯುವುದು ಕಷ್ಟವಾಗಿದೆ. ರೈತರು ಬೆಳೆದ ಬೆಳೆಗೆ ಮಧ್ಯವರ್ತಿಗಳ ದರ ನಿಗದಿಪಡಿಸಬಾರದು. ಕೂಡಲೇ ಸರ್ಕಾರ ಸಾವೆ ಬೆಳೆಗೆ ಬೆಂಬಲ ಬೆಲೆ ಘೋಷಿಸಬೇಕು. ರೈತರ ಪರದಾಟ ತಪ್ಪಿಸಬೇಕು ಎಂದು ರೈತರು ಆಗ್ರಹಿಸಿದರು.'

ಈ ಬಗ್ಗೆ ಪ್ರತಿಕ್ರಿಯಿಸಿದ ಎಪಿಎಂಸಿ ಗೌತಮ್ ಹೊಸದುರ್ಗ ದಲ್ಲಿ ಈ ಬಾರಿ ಸಾವೆ ಬೆಳೆ ನಾಲ್ಕು ಪಟ್ಟು ಹೆಚ್ಚಾಗಿದೆ. ಹಾಗಾಗಿ ಇಳುವರಿ ಅಧಿಕವಾಗಿದೆ. ಜಾಸ್ತಿ ಇದ್ದಾಗ, ಬೆಲೆ ಕಡಿಮೆ ಆಗುವುದು ಸಹಜ. ಹಸಿ ಪದಾರ್ಥ ಆಗಿರುವುದರಿಂದ ಶೇಖರಣೆ ಮಾಡುವುದು ಸಹ ಕಷ್ಟವಾಗುತ್ತದೆ ಎಂಬುದು ಟೆಂಡರ್ ದಾರರ ವಾದ. ಪ್ರತಿಯಾಗಿ ಮಂಗಳವಾರ ರಿ. ಟೆಂಡರ್ ಮಾಡಲಾಗುತ್ತದೆ. ಅಲ್ಲಿಯವರೆಗೂ ರೈತರು ತಂದಿರುವ ಸಾವೆ ಬೆಳೆಗೆ ಅಂಗಡಿಯವರೇ ಜವಾಬ್ದಾರರು. ಈ ಬಗ್ಗೆ ಅವರಿಗೆ ತಿಳಿಸಲಾಗಿದೆ ಎಂದು ಮಾಹಿತಿ ನೀಡಿದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



# ಪತ್ರಿಕಾ ವಿತರಕರ 4ನೇ ರಾಜ್ಯ ಮಟ್ಟದ ಸಮ್ಮೇಳನ 8ಕ್ಕೆ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ, ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಿಕಾ ಹಂಚಿಕೆದಾರರ ವಿತರಕರ ಸಂಘದ ಸಂಯುಕ್ತಾಶ್ರಯದಲ್ಲಿ ಸೆ. 8 ರಂದು ನಗರದ ಅನುಭವ ಮಂಟಪದಲ್ಲಿ ಪತ್ರಿಕಾ ವಿತರಕರ 4 ನೇ ರಾಜ್ಯ ಮಟ್ಟದ ಸಮ್ಮೇಳನ ನಡೆಯಲಿದೆ ಎಂದು ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ಅಧ್ಯಕ್ಷ ಶಂಭುಲಿಂಗ ತಿಳಿಸಿದರು.



ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ಪತ್ರಿಕೆಗಳನ್ನು ನಾಲ್ಕನೇ ಅಂಗ ಎಂದು ಗುರುತಿಸಿದೆ ಆದರೆ ಮನೆ, ಮನೆಗೆ ಪತ್ರಿಕೆಗಳನ್ನು ವಿತರಣೆ ಮಾಡುವವರನ್ನು ನಿರ್ಲಕ್ಷ್ಯಮಾಡಿದೆ. ನಮಗೆ ಯಾವುದೇ ರೀತಿಯ ಸೌಲಭ್ಯಗಳು ಸಿಕ್ಕಲ್ಲ ಕೋವಿಡ್ ಸಮಯದಲ್ಲಿ ಹಲವಾರು ತೊಂದರೆಗಳನ್ನು ಅನುಭವಿಸಿದ್ದು, ಹಲವಾರು ವಿತರಕರನ್ನು ಕಳೆದುಕೊಳ್ಳಬೇಕಾಯಿತು.ಈಸಮಯದಲ್ಲಿ ಒಕ್ಕೂಟವನ್ನು ಮಾಡುವುದರ ಮೂಲಕ ನಮ್ಮ ಸಮಸ್ಯೆಗಳಿಗಾಗಿ ಹೋರಾಟವನ್ನು ಮಾಡಲಾಗುತ್ತಿದೆ, ಈಗ ಸರ್ಕಾರದಿಂದ ನಮಗೆ ಸ್ಪಂದನೆ ಸಿಕ್ಕಿದೆ ಈ ಶ್ರಮದಲ್ಲಿ ನಮಗೆ ಅರ್ಜಿ ಹಾಕಲು ಅನುಮತಿಯನ್ನು ನೀಡಲಾಗಿದೆ ಎಂದರು.

ನಮ್ಮ ಸಂಘಟನೆಯಿಂದ ತುಮಕೂರಲ್ಲಿ ಮೂರನೇ ಸಮ್ಮೇಳವನ್ನು ಮಾಡುವಾಗ ಸರ್ಕಾರ ನಮಗೂ ಸಹಾ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡುವಂತೆ ಮನವಿ ಮಾಡಿದ್ದರಮೇರೆಗೆಈಸಾಲಿನಲ್ಲಿನಮ್ಮವರು ಒಬ್ಬರಿಗೆ ಪ್ರಶಸ್ತಿಯನ್ನು ನೀಡಿದ್ದಾರೆ. ಇದೇ ರೀತಿ ನಮ್ಮ ಕ್ಷೇಮಾಭಿವೃದ್ಧಿಗಾಗಿ ಸರ್ಕಾರ 10 ಕೋಟಿ ರೂ.ಗಳನ್ನು ಮೀಸಲಿಡುವಂತೆ ಈ ಸಾಲಿನ ಸಮ್ಮೇಳನದಲ್ಲಿ ಸರ್ಕಾರವನ್ನು ಆಗ್ರಹಿಸಲಾಗುವುದಲ್ಲದೆ ನಮವರಿಗಾಗಿ ನೀಡುವ ರಾಜ್ಯೋತ್ಸವ ಪ್ರಶಸ್ತ್ರಿಯನ್ನು ಮುಂದುವರೆಸುವಂತೆ ಒತ್ತಾಯಿಸಲಾಗುವುದು ಎಂದು ತಿಳಿಸಿದರು.ಸೆ. 8 ರಂದು ನಡೆಯಲಿರುವ ಸಮ್ಮೇಳನದಲ್ಲಿ ಪತ್ರಿಕೆಯ ವಿತರಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಚರ್ಚಾ ಗೋಷ್ಠಿ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮೇಳನ ಉದ್ಘಾಟಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾದಡಿ.ಸುಧಾಕರ್,ಕಾರ್ಮಿಕಸಚಿವ ಸಂತೋಷ ಲಾಡ್, ಸಂಸದ ಗೋವಿಂದ ಕಾರಜೋಳ, ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ಜಿಲ್ಲೆಯ ಶಾಸಕರುಗಳು, ನಿಗಮ ಅಧ್ಯಕ್ಷರು, ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಸೇರಿದಂತೆ ಜಿಲ್ಲೆಯ ವಿವಿಧ ಮಠಾಧೀಶರು ಭಾಗವಹಿಸಲಿದ್ದಾರೆ ಎಂದರು.

ರಾಜ್ಯದಲ್ಲಿ ಸುಮಾರು 40 ಸಾವಿರ ಪತ್ರಿಕಾ ವಿತರಕರು ಇದ್ದಾರೆ, ಇದರಲ್ಲಿ ಬೆಂಗಳೂರಿನಲ್ಲಿಯೇ 120 ಸ್ಥಳಗಳಲ್ಲಿ ಸುಮಾರು 6500 ಜನ ಪತ್ರಿಕೆಯನ್ನು ವಿತರಣೆ ಮಾಡುತ್ತಿದ್ದಾರೆ, ನಮ್ಮ ಒಕ್ಕೂಟದಲ್ಲಿ 3500 ಜನ ಸದಸ್ಯರಿದ್ದು ಚಿತ್ರದುರ್ಗ ಜಿಲ್ಲೆಯಲ್ಲಿ 500 ಜನ ಸದಸ್ಯರಿದ್ದಾರೆ. ಈ ಸಮ್ಮೇಳನದಲ್ಲಿ ರಾಜ್ಯದ ವಿವಿಧೆಡೆಗಳಿಂದ ಸುಮಾರು 3000 ಜನ ಭಾಗವಹಿಸುವ ನಿರೀಕ್ಷೆ ಇದೆ ಎಂದು ತಿಳಿಸಿದರು.

ಗೋಷ್ಠಿಯಲ್ಲಿ ಚಳ್ಳಕೆರೆ ತಾ.ಅಧ್ಯಕ್ಷ ಓಂಕಾರಪ್ಪ, ಜಿಲ್ಲಾ ಸಂಘದ ಕುಬೇಂದ್ರಪ್ಪ, ಮೊಳಕಾಲ್ಮೂರಿನ ಮಲ್ಲಿಕಾರ್ಜುನ್, ಹಿರಿಯೂರಿನ ನಾಗಣ್ಣ, ಪ್ರಧಾನ ಕಾರ್ಯದರ್ಶಿ ಪ್ರಶಾಂತ್, ಒಕ್ಕೂಟದ ಪ್ರಧಾನ ಕಾರ್ಯದರ್ಶಿ ವಾಸುದೇವ ನಾದೂರು ಭಾಗವಹಿಸಿದ್ದರು.

# ಹಿಂದೂ ಮಹಾಗಣಪತಿ ಸಮಿತಿಯಿಂದ 25 ಗಣಪತಿಗಳಿಗೆ ಬಹುಮಾನ; ಸಂಚಾಲಕ ಪ್ರಭಂಜನ್

» **ಚಿತ್ರದುರ್ಗ**

ವಿಶ್ವ ಹಿಂದು ಪರಿಷತ್-ಬಜರಂಗದಳದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಸಹ ಸೆ.7 ರಿಂದ ಸೆ.28ರವರೆಗೆ ಹಿಂದೂ ಮಹಾ ಗಣಪತಿ ಮಹೋತ್ಸವ ನಡೆಯಲಿದೆ ಎಂದು ದಕ್ಷಿಣ ಪ್ರಾಂತ ಬಜರಂಗದಳದ ಸಂಚಾಲಕ ಪ್ರಭಂಜನ್ ತಿಳಿಸಿದರು.



ಪಂಚಾಚಾರ್ಯ ಕಲ್ಯಾಣ ಮಂಟಪದ ಪಕ್ಕದಲ್ಲಿ ನಿರ್ಮಾಣವಾಗುತ್ತಿರುವ ವರ್ಣರಂಜಿತ ಗಣಪತಿ ಪ್ರತಿಷ್ಠಾಪನಾ ಪೆಂಡಾಲ್‌ನಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಶಾವತಾರ ಮಾದರಿಯಲ್ಲಿ ಪೆಂಡಾಲ್ ಕೆಲಸ ಆರಂಭಗೊಂಡಿದ್ದು, ಬುಧವಾರ ಗಣಪತಿ ಪುರ ಪ್ರವೇಶ ಮಾಡಲಿದೆ. ಹಿಂದೂ ಮಹಾಗಣಪತಿ ಎಂದರೆ ದೇಶಭಕ್ತಿಯನ್ನು ಹೆಚ್ಚಿಸುವುದು ಮಹೋತ್ಸವದ ಉದ್ದೇಶ. ವರ್ಷದಿಂದ ವರ್ಷಕ್ಕೆ ಭಕ್ತಾದಿಗಳ ಸಂಖ್ಯೆ ಜಾಸ್ತಿಯಾಗುತ್ತಿದೆ. ವಿವಿಧ ಕಲಾ ತಂಡ ವಾದ್ಯಗೋಷ್ಠಿಗಳೊಂದಿಗೆ ಹಿಂದು ಮಹಾಗಣಪತಿಯನ್ನು ಮೆರವಣಿಗೆ ಮೂಲಕ ಪೆಂಡಾಲ್‌ಗೆ ತರಲಾಗುವುದು ಎಂದು ಹೇಳಿದರು.ಜಿಲ್ಲೆಯಲ್ಲಿ ಎಲ್ಲಿಯೇ ಪ್ರತಿಷ್ಠಾಪಿಸುವ ಗಣಪತಿಯಲ್ಲಿ ರಾಷ್ಟ್ರೀಯತೆ, ದೇಶಭಕ್ತಿ, ಸಂಸ್ಕೃತಿಯನ್ನು ಬಿಂಬಿಸುವುದು ಕಂಡು ಬಂದಲ್ಲಿ ಅಂತಹ 25 ಗಣಪತಿಗಳಿಗೆ ಬಹುಮಾನ ನೀಡಲಾಗುವುದು. ಗಣಪತಿ ವಿಸರ್ಜನಾ ಮೆರವಣಿಗೆಯನ್ನು ಬಜರಂಗದಳದ ನೀರಜ್ ತೋಗೇರಿಯಾ ಉದ್ಘಾಟಿಸುವರು ಎಂದು ನುಡಿದರು.

2024ರ ಹಿಂದೂ ಮಹಾ ಗಣಪತಿ ಉತ್ಸವ ಸಮಿತಿ ಅಧ್ಯಕ್ಷ ಬಿ.ನಯನ್ ಮಾತನಾಡಿ ಸೆ.7 ರಿಂದ 28ರವರೆಗೆ ಸುಮಾರು 21 ದಿನಗಳ ಕಾಲ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸೆ. 26 ರಂದು ಕನಕ ವೃತ್ತದಿಂದ ಹೊರಡುವ ಬೈಕ್ ರ‍್ಯಾಲಿ ನಗರದೆಲ್ಲೆಡೆ ಸಂಚರಿಸಲಿದ್ದು, ಸೆ. 28 ರಂದು ವಿಸರ್ಜಿಸಲಾಗುವುದು ಎಂದರು.

ಉತ್ಸವ ಸಮಿತಿಯ ಮಾರ್ಗದರ್ಶಕ ಟಿ.ಬದರಿನಾಥ್ ಮಾತನಾಡಿ, ಗರುಡಾರೂಢ ಪ್ರಭಾವಳಿ ಪೀಠ ಸೇರಿ ಈ ಬಾರಿಯ ಗಣಪತಿ 17 ಅಡಿ ಎತ್ತರದಲ್ಲಿದೆ. ಐದು ಎಲ್.ಇ.ಡಿ. ವ್ಯವಸ್ಥೆಯಿರುತ್ತದೆ. ಪ್ರತಿನಿತ್ಯ ಬೆಳಿಗ್ಗೆ 11-45 ರಿಂದ 12-15 ರವರೆಗೆ ಸಂಜೆ 7-45 ರಿಂದ 8-15 ರವರೆಗೆ ಹದಿಮೂರಕ್ಕೂ ಹೆಚ್ಚು ರೀತಿಯ ಮಹಾ ಮಂಗಳಾರತಿ ನಡೆಯಲಿದೆ. ಹಿಂದೂ ಮಹಾ ಗಣಪತಿ ಇಷ್ಟೊಂದು ದೊಡ್ಡ ಮಟ್ಟದಲ್ಲಿ ಬೆಳೆಯುವುದಕ್ಕೆ ಸಮಸ್ತ ಭಕ್ತರು ಹಾಗೂ ಸಾರ್ವಜನಿಕರು, ದಾನಿಗಳ ಸಹಕಾರವಿದೆ ಕಾರ್ಕಳ ಸಾಗರದವರು ಪೆಂಡಾಲ್ ನಿರ್ಮಿಸುತ್ತಿದ್ದು, ಅಂದಾಜು ಹದಿನಾರರಿಂದ ಹದಿನೇಳು ಲಕ್ಷ ರೂ.ಗಳ ವೆಚ್ಚವಾಗಲಿದೆ. ಎಂದು ತಿಳಿಸಿದರು.

ಉತ್ಸವ ಸಮಿತಿ ಪ್ರಧಾನ ಕಾರ್ಯದರ್ಶಿ ಶರಣ್, ಬಜರಂಗದಳದ ಜಿಲ್ಲಾ ಸಂಯೋಜಕ ಸಂದೀಪ್, ವಿಶ್ವಹಿಂದೂ ಪರಿಷತ್ ನಗರಾಧ್ಯಕ್ಷ ಈ.ಅಶೋಕ್, ಉಪಾಧ್ಯಕ್ಷ ಜಿ.ಎಸ್.ರಂಗಸ್ವಾಮಿ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ನೀಲಕಂಠೇಶ್ವರ ಸ್ವಾಮಿಗೆ ನೋಟಿನ ಅಲಂಕಾರ



» **ಚಿತ್ರದುರ್ಗ**

ನಗರದ ಸಂತೇಪೇಟೆ ವೃತ್ತದ ಬಳಿಯಿರುವ ಶ್ರೀ ನೀಲಕಂಠೇಶ್ವರ ಸ್ವಾಮಿಗೆ ಶ್ರಾವಣ ಮಾಸದ ಕೊನೆಯ ಸೋಮವಾರದ ಅಂಗವಾಗಿ ನೋಟಿನ ಅಲಂಕಾರವನ್ನು ಮಾಡಲಾಗಿತ್ತು. ಸೋಮವಾರ ಬೆಳಿಗ್ಗೆಯಿಂದ ದೇವಸ್ಥಾನದ ಪ್ರಧಾನ ಅರ್ಚಕರಾದ ಶಾಂತಮೂರ್ತಿ ಸೇರಿದಂತೆ ಇತರೆ ಸ್ವಾಮಿಗಳು ಸೇರಿ ಸುಮಾರು 5ರಿಂದ6 ಗಂಟೆಯಗಳವರೆಗೆ ಸ್ವಾಮಿಗೆ ನೋಟಿನ ಅಲಂಕಾರವನ್ನು ಮಾಡಿದ್ದಾರೆ ಇದರಲ್ಲಿ 10,20,50,100,200 ಹಾಗೂ 500 ರೂ.ಗಳ ನೋಟನ್ನು ಬಳಕೆ ಮಾಡಲಾಗಿದೆ. ಇದರ ಒಟ್ಟು ಮೊತ್ತ ಸುಮಾರು 18 ಲಕ್ಷ ರೂ.ಗಳಾಗಿದೆ ಎಂದು ಅಂದಾಜಿಸಲಾಗಿದೆ. ಶ್ರಾವಣ ಮಾಸದಲ್ಲಿ ಸೋಮವಾರ ಸ್ವಾಮಿಗೆ ವಿವಿಧ ರೀತಿಯ ಅಲಂಕಾರ ಮಾಡುವುದು ಪದ್ಧತಿಯಾಗಿದೆ ಈ ಬಾರಿ ವಿಶೇಷವಾಗಿ ಅದರಲ್ಲೂ ಪ್ರಥಮ ಬಾರಿಗೆ ಸ್ವಾಮಿಗೆ ಭಕ್ತಾಧಿಗಳ ಸಹಕಾರದಿಂದ ನೋಟಿನ ಅಲಂಕಾರವನ್ನು ಮಾಡಲಾಗಿದೆ. ಇದರಲ್ಲಿ ನೋಟನ್ನು ಹಾರದ ರೀತಿ, ಥರ್ಮಕೋಲ್‌ಗೆ ಹಾಗೂ ಪ್ಲೇವುಂಡ್‌ನಲ್ಲಿ ಜೋಡಿಸಿ ಸ್ವಾಮಿಗೆ ಅಲಂಕಾರ ಮಾಡಲಾಗಿದೆ. ನಿನ್ನೆಯಿಂದಲೂ ದೇವಾಲಯಕ್ಕೆ ಹಲವಾರು ಭಕ್ತಾಧಿಗಳು ಆಗಮಿಸುವುದರ ಮೂಲಕ ಸ್ವಾಮಿಯ ಅಲಂಕಾರವನ್ನು ಕಂಡು ಪುನೀತರಾಗಿದ್ದಾರೆ, ನೋಟಿನ ಅಲಂಕಾರದಲ್ಲಿ ಸ್ವಾಮಿಯೂ ಸಹಾ ವಿಶೇವಾದ ರೀತಿಯಲ್ಲಿ ಭಕ್ತಾದಿಗಳಿಗೆ ದರ್ಶನ ನೀಡಿದ್ದಾರೆ.

## ಪ್ರಶಸ್ತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ರಾಜ್ಯ ಸರ್ಕಾರದ ವತಿಯಿಂದ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಬರುವ ಅಕ್ಟೋಬರ್ 17 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಗುತ್ತದೆ. ಈ ಜಯಂತಿ ಸಂಧರ್ಭದಲ್ಲಿ ಪರಿಶಿಷ್ಟ ಪಂಗಡ ಜನಾಂಗದ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳಿಗೆ ಹಾಗೂ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಅರ್ಹ ವ್ಯಕ್ತಿಗಳಿಗೆ ಶ್ರೀ ಮಹರ್ಷಿ ವಾಲ್ಮೀಕಿ ರವರ ಸ್ಮರಣಾರ್ಥ ಪ್ರಶಸ್ತಿ ನೀಡಿ ಗೌರವಿಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಕೊಠಡಿ ಸಂಖ್ಯೆ 45. ಎರಡನೇ ಮಹಡಿ. ಜಿಲ್ಲಾಡಳಿತ ಭವನ, ದಾವಣಗೆರೆ. ಹೆಚ್ಚಿನ ವಿವರಗಳಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಸಂರ್ಪಕಿಸಿ.

# ಭಾರತೀಯ ಜೀವ ವಿಮಾ ನಿಗಮ ಶಾಖೆ ವಿಮಾ ಸಪ್ತಾಹ

» **ಚಿತ್ರದುರ್ಗ**

ನಗರದ ಭಾರತೀಯ ಜೀವ ವಿಮಾ ನಿಗಮ ಶಾಖೆ ವತಿಯಿಂದ ಏರ್ಪಡಿಸಿದ 68ನೇ ವರ್ಷದ ವಿಮಾ ಸಪ್ತಾಹ ಕಾರ್ಯಕ್ರಮದ ಉದ್ಘಾಟನೆಯನ್ನು ಹಿರಿಯ ಶಾಖಾ ವ್ಯವಸ್ಥಾಪಕ ಎಸ್. ಹನುಮಂತ ನಾಯಕ ನೆರವೇರಿಸಿದರು.




ನಂತರ ಮಾತನಾಡಿ ಭಾರತೀಯ ಜೀವ ವಿಮಾ ಸಂಸ್ಥೆ ದೇಶದಲ್ಲಿಯೇ ಏಕೈಕ ಅತ್ಯುತ್ತಮ ವಿಶ್ವಾಸವುಳ್ಳ ವಿಮಾ ಸಂಸ್ಥೆಯಾಗಿದೆ, ದೇಶದ ಬಹುತೇಕ ಜನರು ಈ ವಿಮಾ ಸಂಸ್ಥೆಯ ಬಗ್ಗೆ ಅತ್ಯಂತ ವಿಶ್ವಾಸವನ್ನು ಇಟ್ಟುಕೊಂಡಿದ್ದು ವಿಮಾ ಪಾಲಸಿದ್ಧಾರರಾಗಿದ್ದಾರೆ. ಹಾಗಾಗಿ ನಾವುಗಳೆಲ್ಲಾರು ಸಹಕಾರ ಸಹಬಾಳ್ವೆಯಿಂದ ವಿಮಾ ಸಂಸ್ಥೆಯ ಅಭಿವೃದ್ಧಿಗೆ ಶ್ರಮಿಸೋಣಾ ಎಂದರು.

ನಾನು ಈ ಶಾಖೆಗೆ ಹೊಸದಾಗಿ ಹಿರಿಯ ಶಾಖಾ ವ್ಯವಸ್ಥಾಪಕರಾಗಿ ಅಧಿಕಾರ ವಹಿಸಿಕೊಂಡಿದ್ದೇನೆ ನಿಮ್ಮಗಳ ಸಹಕಾರ ಬಹಳ ಮುಖ್ಯವಾಗಿದೆ ವ್ಯವಸ್ಥಾಪಕ ಮತ್ತು ಸಿಬ್ಬಂದಿ ವರ್ಗ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ನಿಮ್ಮಗಳ ಸಹಕಾರದಿಂದ ನನ್ನ ಸೇವಾ ಅವಧಿಯಲ್ಲಿ ನಮ್ಮ ಶಾಖೆ ವಿಭಾಗ ಮಟ್ಟದಲ್ಲಿ ಅತ್ಯುನ್ನತ ಗುರಿ ಮತ್ತು ಶ್ರೇಣಿ ತಲುಪುವುದಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಹೇಳಿ ಎಲ್ಲರಿಗೂ ವಿಮಾ ಸಪ್ತಾಹದ ಶುಭಾಶಯಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಶಾಖ ವ್ಯವಸ್ಥಾಪಕ ಲಕ್ಷ್ಮಿಕಾಂತ್, ಹಿರಿಯ ಆಡಳಿತ ಅಧಿಕಾರಿ ಸೀತಾ ಲಕ್ಷ್ಮಿ ಅಭಿವೃದ್ಧಿ ಅಧಿಕಾರಿ ಮಹೇಶ್ ಎ . ಓ. ಶ್ಯಾಮಣ್ಣ ಎ. ಎ.ಓ. ಯತೀಶ್ ಸಾಂಸ್ಕೃತಿಕ ಮತ್ತು ಕ್ರೀಡಾ ಕಾರ್ಯದರ್ಶಿ ಚಂದ್ರು ಎಚ್.ಜಿ.ಎ.ಗಳಾದ ರೇಣುಕಾ ಇಂದಿರಾ ಮಮತಾ ನಿರ್ಮಲ ಸುಮಾ ಗೀತಾ ಗಿರಿವಾಣಿ ಶೇಷಾದ್ರಿ ಶ್ರೀನಿವಾಸ್ ಮಹಿಳಾ ಪ್ರತಿನಿಧಿ ಕೆ. ಸುಜಾತ ತ್ರಿವೇಣಿವೀಣಾ ದೇವರಾಜ್ ವಿವಿಧ ಶ್ರೇಣಿಯ ವಿಮಾ ಪ್ರತಿನಿಧಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಎಂ.ರಾಮಪ್ಪ ಅವರಿಗೆ ಹುಣಸೂರು ಉಸ್ತುವಾರಿ

» **ಚಿತ್ರದುರ್ಗ**



ಕಾಂಗ್ರೆಸ್ ಹಿರಿಯ ಮುಖಂಡರು, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಎಂ.ರಾಮಪ್ಪರವರನ್ನು ಮೈಸೂರಿನ ಹುಣಸೂರು ವಿಧಾನಸಭಾ ಕ್ಷೇತ್ರಕ್ಕೆ ಉಸ್ತುವಾರಿಗಳನ್ನಾಗಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನೇಮಕ ಮಾಡಿದ್ದಾರೆ. ಈ ಹಿಂದೆ ರಾಣೇಬೆನ್ನೂರು ಹಾಗೂ ಹಾವೇರಿ ಜಿಲ್ಲೆಯ ಉಸ್ತುವಾರಿಗಳಾಗಿ ಕೆಲಸ ಮಾಡಿ ಅಲ್ಲಿನ ವಿಧಾನಸಭಾ ಕ್ಷೇತ್ರದ ಗೆಲುವಿಗೆ ಸಹಕಾರಿಯಾಗಿದ್ದಾರೆ. ಇವರನ್ನು ಮೈಸೂರಿನ ಹೆಚ್.ಡಿ.ಕೋಟೆಯ ಹುಣಸೂರು ಕ್ಷೇತ್ರಕ್ಕೆ ಉಸ್ತುವಾರಿಗಳನ್ನಾಗಿ ನೇಮಿಸಲಾಗಿದೆ.

### ವೀರಭದ್ರಪ್ಪ ನಿಧನ

» **ಹೊಸದುರ್ಗ**



ತಾಲೂಕಿನ ಆನಿವಾಳ ಗ್ರಾಮದ ನಿವೃತ್ತ ಪೊಲೀಸ್ ಉಪ ನಿರೀಕ್ಷಕರಾದ ಪಿ ವೀರಭದ್ರಪ್ಪ (78) ವಯೋಸಹಜ ನಿಧನರಾಗಿದ್ದಾರೆ.ಇವರು ಬೆಂಗಳೂರು ನಗರದಲ್ಲಿ ಸೇವೆಯುಲ್ಲಿರುವಾಗ ಅಂತರ್‌ರಾಜ್ಯ ಅಪರಾಧಿಗಳನ್ನು ಪತ್ತೆ ಹಚ್ಚುವಲ್ಲಿ ಹೆಚ್ಚಿನ ಪ್ರಮುಖ ಪಾತ್ರವನ್ನು ವಹಿಸುತ್ತಿದ್ದ ಕೀರ್ತಿ ಇಲಾಖೆಯಲ್ಲಿ ಇವರದಾಗಿತ್ತು. ಪೊಲೀಸ್ ಪೇದೆಯಿಂದ ಹಂತ ಹಂತವಾಗಿ ಬಡ್ತಿಗಳನ್ನು ಪಡೆದು ಪಿಎಸ್‌ಐ ಯಾಗಿ ನಿವೃತ್ತಿಯನ್ನು ಹೊಂದಿದ ಇವರು ಇಲಾಖಾ ಹಲವು ಪ್ರಶಸ್ತಿ ಪುರಸ್ಕಾರಗಳೊಂದಿಗೆ ರಾಜ್ಯಪಾಲರಿಂದ ಪ್ರಶಸ್ತಿಗೆ ಭಾಜನರಾಗಿದ್ದರು. ಇವರ ಅಂತ್ಯಸಂಸ್ಕಾರವನ್ನ ಆನಿವಾಳದ ಅವರ ತೋಟದಲ್ಲಿ ವೀರಶೈವ ಪರಂಪರೆಯಂತೆ ನೆರವೇರಿಸಲಾಯಿತು.ಮೃತರು ಪತ್ನಿ ಪತ್ನಿ ಇಬ್ಬರು ಗಂಡು ಮಕ್ಕಳು ಹಾಗೂ ಇಬ್ಬರು ಹೆಣ್ಣು ಮಕ್ಕಳು ಮತ್ತು ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನ ಬಿಟ್ಟು ಆಗಲಿದ್ದಾರೆ.

### ಸೆ.24 ರಂದು ಸಹಕಾರ ಸಂಘದ ಸಭೆ

» **ಹೊಸದುರ್ಗ**

ಪಟ್ಟಣದ ಸಹರ ಅಲ್ಪ ಸಂಖ್ಯಾತರ ವಿವಿದೋದ್ದೇಶ ಸಹಕಾರ ಸಂಘದ 2024-25 ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯು ಸೆ.21 ರಂದು ಶನಿವಾರ ಪಟ್ಟಣದ ಟಿ.ಬಿ.ವೃತ್ತದ ಬಳಿ ಇರುವ ಗೌಸಿಯಾ ಶಾದಿ ಮಹಲ್‌ನಲ್ಲಿ ಬೆಳಿಗ್ಗೆ 11 ಗಂಟೆಗೆ ಸಂಘದ ಅಧ್ಯಕ್ಷರಾದ ಮಹಮ್ಮದ್‌ಅಲೀಂಸಾಬ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಾವಿದ್ ತಿಳಿಸಿದ್ದಾರೆ.

### ಆಸ್ತಿ ತೆರಿಗೆ ಪಾವತಿ ಅವಧಿ ವಿಸ್ತರಣೆ

» **ಚಿತ್ರದುರ್ಗ**

ನಗರಸಭೆ ವ್ಯಾಪ್ತಿಯ 2024-25ನೇ ಸಾಲಿಗೆ ಸ್ವಯಂ ಘೋಷಿತ ಆಸ್ತಿ ತೆರಿಗೆ ಪಾವತಿಗೆ ಏಪ್ರಿಲ್ ತಿಂಗಳಲ್ಲಿ ನೀಡಲಾಗುತ್ತಿರುವ ಶೇ.5 ರಿಯಾಯಿತಿಯನ್ನು ಸೆಪ್ಟೆಂಬರ್ 14 ರವರೆಗೆ ವಿಸ್ತರಿಸಲಾಗಿದೆ. ಈ ಅವಕಾಶವನ್ನು ಸಾರ್ವಜನಿಕರು ಸದುಪಯೋಗಪಡೆದುಕೊಳ್ಳಬೇಕು ಎಂದು ನಗರದಸಭೆ ಪೌರಾಯುಕ್ತೆ ಎಂ.ರೇಣುಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೇಕರಿ ಉತ್ಪನ್ನಗಳ ತಯಾರಿಕಾ ತರಬೇತಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಕೃಷಿ ವಿಜ್ಞಾನ ಕೇಂದ್ರ ಬಬ್ಬೂರು ಫಾರಂನಲ್ಲಿ ಸ್ಥಾಪಿಸಿರುವ ಬೇಕರಿ ಘಟಕದಲ್ಲಿ ಬೆಣ್ಣೆ ಬಿಸ್ಕತ್, ರಾಗಿ ಬಿಸ್ಕತ್, ಕೊಬ್ಬರಿ ಬಿಸ್ಕತ್, ಫ್ರೂಟ್ ಕೇಕ್, ಪ್ಲೇನ್ ಕೇಕ್ ಸೇರಿದಂತೆ ವಿವಿಧ ಬೇಕರಿ ಉತ್ಪನ್ನಗಳ ತಯಾರಿಕೆ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ತರಬೇತಿಯಲ್ಲಿ ಭಾಗವಹಿಸಲು ಇಚ್ಚೆಯುಳ್ಳವರು ತರಬೇತಿ ಶುಲ್ಕ ರೂ.200/- ಪಾವತಿಸಿ, ಸೆಪ್ಟೆಂಬರ್ 12ರೊಳಗಾಗಿ ದೂರವಾಣಿ ಮುಖಾಂತರ ಅಥವಾ ಖುದ್ದಾಗಿ ಸಂಪರ್ಕಿಸಿ ಹೆಸರು ನೊಂದಾಯಿಸಬಹುದಾಗಿದೆ. ಮೊದಲು ನೊದಾಯಿಸಿದವರಿಗೆ ಮೊದಲ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಬಬ್ಬೂರು ಫಾರಂ ಕೃಷಿ ವಿಜ್ಞಾನ ಕೇಂದ್ರದ ಗೃಹ ವಿಜ್ಞಾನಿ ಡಾ. ಎಂ.ಜೆ.ಸರಸ್ವತಿ ಮೊಬೈಲ್ ಸಂಖ್ಯೆ: 9986647124 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

### ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ

» **ದಾವಣಗೆರೆ**

ಮಹಾರಾಷ್ಟ್ರದ ನಾಗಪುರ ದೀಕ್ಷಾ ಭೂಮಿಯಲ್ಲಿ ಅಕ್ಟೋಬರ್ 12 ರಂದು ನಡೆಯಲಿರುವ ದಮ್ಮ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ಯಾತ್ರೆ ಕೈಗೊಳ್ಳಬಯಸುವ ಡಾ.ಬಿ.ಆರ್. ಅಂಬೇಡ್ಕರ್ ಅನುಯಾಯಿಗಳಿಂದ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಸೆಪ್ಟೆಂಬರ್ ರವರೆಗೆ ವಿಸ್ತರಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಗೌರಸಮುದ್ರ ಜಾತ್ರೆಯಲ್ಲಿ ಬಾಲ್ಯವಿವಾಹ ತಡೆ ಕುರಿತು ಜಾಗೃತಿ

» **ಚಳ್ಳಕೆರೆ**

ತಾಲ್ಲೂಕಿನ ಗೌರಸಮುದ್ರದಲ್ಲಿ ನಡೆದ ಮಾರಮ್ಮದೇವಿ ಜಾತ್ರೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆವತಿಯಿಂದ ಬಾಲ್ಯವಿವಾಹವನ್ನು ತಡೆಯುವಂತೆ ಮತ್ತು ಯಾವುದೇ ಕಾರಣಕ್ಕೂ ಪ್ರೋತ್ಸಾಹಿಸದಂತೆ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ನಡೆಸಿದರು.






ಜಿಲ್ಲಾ ಶಿಶುಅಭಿವೃದ್ಧಿ ಅಧಿಕಾರಿ ಮಂಜುಳಾ, ತಾಲ್ಲೂಕು ಶಿಶುಅಭಿವೃದ್ಧಿ ಅಧಿಕಾರಿಹರಿಪ್ರಸಾದ್‌ಮಾರ್ಗದರ್ಶನದಲ್ಲಿ ಇಲಾಖೆಯ ಎಸಿಡಿಪಿಒ ಜಯಶ್ರೀ ಮತ್ತು ತಂಡ ಜಾತ್ರೆಗೆ ಆಗಮಿಸಿದ್ದ ನೂರಾರು ಜನರಿಗೆ ಇಲಾಖೆಯಿಂದ ನೀಡಲಾದ ಬಾಲ್ಯವಿವಾಹ ತಡೆಯ ಕರಪತ್ರಗಳನ್ನು ವಿತರಿಸಿದರು. ಈ ಸಂದರ್ಭದಲ್ಲಿ ಸಾರ್ವಜನಿಕರಿಗೆ ತಮ್ಮ ವ್ಯಾಪ್ತಿಯಲ್ಲಿ ಯಾರಾದರೂ ಅಪ್ರಾಪ್ತ ಬಾಲಕಿಯ ವಿವಾಹಕ್ಕೆ ಸಿದ್ದತೆ ನಡೆಸಿದ್ದರೆ ಸಮೀಪದ ಸಹಾಯವಾಣಿ, ಅಂಗನವಾಡಿ, ಸಿಡಿಪಿಒ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಮನವಿ ಮಾಡಲಾಯಿತು.

ಕೇವಲ ಜಾಗೃತಿ ಮೂಡಿಸುವ ಜೊತೆಗೆ ಬಾಲ್ಯವಿವಾಹ ನಡೆಸಿದರೆ ಜೈಲು ಶಿಕ್ಷೆ ಹಾಗೂ ಅಧಿಕ ದಂಡವನ್ನು ವಿಧಿಸುವ ಬಗ್ಗೆ ಜನರಿಗೆ ತಿಳುವಳಿಕೆ ನೀಡಲಾಯಿತು. ಅಪ್ರಾಪ್ತ ಬಾಲಕಿಯ ವಿವಾಹವನ್ನು ತೆರೆಯ ಮೆರೆಯಲ್ಲಿ ಕೈಗೊಂಡರೂ ಸಹ ಅಂತಹ ಪ್ರಕರಣಗಳನ್ನು ಪತ್ತೆಹಚ್ಚಿ ಕಾನೂನು ಪ್ರಕಾರ ಪ್ರಕರಣ ದಾಖಲಿಸಲು ಅವಕಾಶವಿದೆ. ಈಗಾಗಲೇ ಇಲಾಖೆಯಿಂದ ಪೊಲೀಸ್ ಇಲಾಖೆಯೊಂದಿಗೆ ಮಾಹಿತಿಯನ್ನು ಸಹ ನೀಡಲಾಗಿದೆ. ಪ್ರಕರಣ ದಾಖಲಾದರೆ ಕುಟುಂಬದ ಬಹುತೇಕ ಸದಸ್ಯರಿಗೆ ಜೈಲು ಶಿಕ್ಷೆ ಹಾಗೂ ದಂಡವನ್ನು ವಿಧಿಸುವ ಅವಕಾಶವಿದೆ. ಈ ಬಗ್ಗೆ ಜಾಗೃತರಾಗಬೇಕಲ್ಲದೆ, ಇಂತಹ ಪದ್ದತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಇಲಾಖೆಯೊಂದಿಗೆ ಕೈಜೋಡಿಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ರೇಖಾ, ತಿಪ್ಪೇಶ್ ಮುಂತಾದವರು ಇದ್ದರು.

## ಫಾಸ್ಟ್ ನ್ಯೂಸ್

### ಪ್ರೋತ್ಸಾಹಧನಕ್ಕಾಗಿ ವಿದ್ಯಾರ್ಥಿಗಳಿಂದ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಸಮಾಜ ಕಲ್ಯಾಣ ಇಲಾಖಾ ವೆಬ್ ಸೈಟ್ www.sw.kar.nic.inನಲ್ಲಿ ಅರ್ಜಿ ಸಲ್ಲಿಸಬಹುದು. ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿಸಬೇಕು. ಜಾತಿ ಪ್ರಮಾಣ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್, ಆಧಾರ್ ಕಾರ್ಡ್ ಜೆರಾಕ್ಸ್‌ಗಳ ದೃಢೀಕೃತ ಪ್ರತಿ ಹಾಗೂ ಅರ್ಜಿ ಹಾಕಿದ ಪ್ರತಿಯನ್ನು ಮುಖ್ಯೋಪಾಧ್ಯಾಯರ ದೃಢೀಕರಣದೊಂದಿಗೆ ಸಂಬಂಧಿಸಿದ ತಾಲ್ಲೂಕುಗಳ ಸಹಾಯಕ ನಿರ್ದೇಶಕರ ಕಚೇರಿ, ಅಥವಾ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ-37. ಮೊದಲನೇ ಮಹಡಿ, ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಜಂಟಿ ನಿರ್ದೇಶಕ ನಾಗರಾಜ ತಿಳಿಸಿದ್ದಾರೆ.

### ಸರ್ವಪಲ್ಲಿರಾಧಕೃಷ್ಣರವರ ಜನ್ಮದಿನಾಚರಣೆ ಶಿಕ್ಷಕರ ದಿನಾಚರಣೆ ಸೆ.5ರಂದು

» ಚಳ್ಳಕೆರೆ

ಶಿಕ್ಷಣ ಕ್ಷೇತ್ರದ ಭೀಷ್ಮ ಡಾ.ಸರ್ವಪಲ್ಲಿರಾಧಕೃಷ್ಣರವರ ಜನ್ಮದಿನವನ್ನು ಶಿಕ್ಷಕರ ದಿನಾಚರಣೆ ಮಾಡಲಾಗುತ್ತಿದ್ದು, ಸೆ.5ರ ಗುರುವಾರ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಶಿಕ್ಷಕ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಸೆ.5ರ ಗುರುವಾರ ಬೆಳಗ್ಗೆ 8.30ಕ್ಕೆ ನಗರದ ಪ್ರವಾಸಿಮಂದಿರದಿಂದ ಡಾ.ಸರ್ವಪಲ್ಲಿರಾಧಕೃಷ್ಣನ್‌ರವರ ಭಾವಚಿತ್ರದೊಂದಿಗೆ ಬೃಹತ್ ಮೆರವಣಿಗೆ ಆರಂಭವಾಗಲಿದೆ. ವಿಶೇಷ ಕಲಾತಂಡಗಳು, ಸಾವಿರಾರು ಶಿಕ್ಷಕರು ಮೆರವಣಿಗೆಯಲ್ಲಿ ಭಾಗವಹಿಸುವರು. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಸಭೆಯ ಅಧ್ಯಕ್ಷತೆ ವಹಿಸುವರು. ನಗರಸಭಾ ಅಧ್ಯಕ್ಷೆ ಜೈತುಂಬಿ ಮೆರವಣಿಗೆಗೆ ಚಾಲನೆ ನೀಡುವರು. ಶಿಕ್ಷಕ ಶ್ರೀಕಾಂತ್‌ಹಲುಮನಿ ಉಪನ್ಯಾಸ ನೀಡುವರು. ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕರು, ಶಿಕ್ಷಣ ಪ್ರೇಮಿಗಳು ಆಗಮಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದ್ದಾರೆ.

### ವಿದ್ಯುತ್ ಅಡಚಣೆ ಸಂಬಂಧಪಟ್ಟ ಸಹಾಯಕ ಇಂಜಿನಿಯರ್ ಸಂಪರ್ಕಿಸಿ

» ಚಿತ್ರದುರ್ಗ

ಬೆಸ್ಕಾಂ ಚಿತ್ರದುರ್ಗ ನಗರ ಉಪ-ವಿಭಾಗದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ ಅಥವಾ ಬೆಸ್ಕಾಂಗೆ ಸಂಬಂಧಿಸಿದ ದೂರುಗಳು ಇದ್ದಲ್ಲಿ ಈ ಕೆಳಕಂಡ ಮೊಬೈಲ್ ನಂಬರ್ ಮತ್ತು ದೂರವಾಣಿಗೆ ಕರೆ ಮಾಡುವಂತೆ ಬೆಸ್ಕಾಂ ಕೋರಿದೆ. ನಗರದ ತುರುವನೂರು ರಸ್ತೆ, ಬಿ.ಎಲ್.ಗೌಡ ಬಡಾವಣೆ, ತಿಪ್ಪಜ್ಜಿ ವೃತ್ತ, ಬಿ.ಡಿ.ರಸ್ತೆ, ಲಕ್ಷ್ಮೀ ಬಜಾರ್, ಬಸವೇಶ್ವರ ಟಾಕೀಸ್, ಧರ್ಮಶಾಲಾ ರಸ್ತೆ, ದೊಡ್ಡಪೇಟೆ, ಚಿಕ್ಕಪೇಟೆ, ಎಸ್.ಆರ್. ಲೇಔಟ್, ಕೆಳಗೋಟೆ, ಮುನ್ಸಿಪಲ್ ಕಾಲೋನಿ, ಬ್ಯಾಂಕ್ ಕಾಲೋನಿ, ಕೆಹೆಚ್‌ಬಿ ಹೌಸಿಂಗ್ ಬೋರ್ಡ್, ವೆಂಕಟೇಶ್ವರ ಲೇ ಔಟ್, ಚಳ್ಳಕೆರೆ ರಸ್ತೆ ಕೈಗಾರಿಕಾ ಪ್ರದೇಶ, ವೇಮನ ನಗರ, ಜೆ.ಎಂ.ರಸ್ತೆ, ಜಿಲ್ಲಾ ಸರ್ಕಾರಿ ಆಸ್ಪತ್ರೆ, ಕಾಮನಬಾವಿ, ಫಿಲ್ಟರ್ ಹೌಸ್, ಕೋಟೆ, ಐ.ಯು.ಡಿ.ಪಿ. 2ನೇ ಹಂತ, ಕಂದಾಯಗಿರಿ ನಗರ, ಕೆಹೆಚ್‌ಬಿ, ಟೀಚರ್ಸ್ ಕಾಲೋನಿ, ಕ್ರೀಡಾಂಗಣ, ಎಲಅಖ 1-6ನೇ ಕ್ರಾಸ್, ವಿಪಿ ಲೇಔಟ್, ಆಜಾದ್ ನಗರ, ಜೆಪಿ ರಸ್ತೆ, ಪ್ರಸನ್ನ ಟಾಕೀಸ್, ರಾಂದಾಸ್ ಕಾಂಪೌಂಡ್ ಪ್ರದೇಶದ ಸಾರ್ವಜನಿಕರು ಸಹಾಯಕ ಇಂಜಿನಿಯರ್ ಘಟಕ-1, ನಗರ ಉಪವಿಭಾಗ, ಚಿತ್ರದುರ್ಗ ಮೊಬೈಲ್ ನಂ.9449876179, ದೂರು ಸೇವಾ ಕೇಂದ್ರ 9449876163 ಗೆ ಸಂಪರ್ಕಿಸಬಹುದು. ನಗರದ ಹೊಳಲ್ಕೆರೆ ರಸ್ತೆ, ಧವಳಗಿರಿ ಬಡಾವಣೆ, ಚೋಳಗುಡ್ಡ, ನೆಹರೂ ನಗರ, ಅಗಸನಕಲ್ಲು, ವಿಧ್ಯಾನಗರ, ಕೆ.ಎಸ್. ಆರ್.ಟಿ.ಸಿ. ಬಸ್ ಸ್ಟಾಂಡ್, ಮೆದೇಹಳ್ಳಿ ರಸ್ತೆ, ಬುರುಜನಹಟ್ಟಿ, ಎ.ಪಿ.ಎಂ.ಸಿ., ಜೆ.ಇಂ.ಐ.ಟಿ. ಕ್ಯಾಂಪಸ್, ಜಯಲಕ್ಷ್ಮಿ ಬಡಾವಣೆ, ರೈಲ್ವೇ ಸ್ಟೇಷನ್, ಮಠದ ಕುರುಬರಹಟ್ಟಿ, ಮಾಳಪ್ಪನಹಟ್ಟಿ ರಸ್ತೆ, ಬಿ.ಡಿ.ರಸ್ತೆ, ಅಯ್ಯಪ್ಪಸ್ವಾಮಿ ದೇವಸ್ಥಾನ, ಮಾರುತಿ ನಗರ, ಈದ್ಗಾ ಮೊಹಲ್ಲಾ ಈಶ್ವರ ಕಲ್ಲು, ಜಯಲಕ್ಷ್ಮಿ ಬಡಾವಣೆ. ಗಾರಹಟ್ಟಿ ಗ್ರಾಮ ಪಂಚಾಯಿತಿ, ಕವಾಡಿಗರಹಟ್ಟಿ, ಆಶ್ರಯ ಬಡಾವಣೆ ಪ್ರದೇಶದ ಸಾರ್ವಜನಿಕರು ಸಹಾಯಕ ಇಂಜಿನಿಯರ್ ಘಟಕ-2, ನಗರ ಉಪವಿಭಾಗ, ಚಿತ್ರದುರ್ಗ ಮೊಬೈಲ್ ನಂ.9449876180, ದೂರು ಸೇವಾ ಕೇಂದ್ರ 08194-222440 ಗೆ ಸಂಪರ್ಕಿಸಬಹುದು. ಮದಕರಿಪುರ, ದ್ಯಾಮವ್ವನಹಳ್ಳಿ, ಜೆ.ಎನ್.ಕೋಟೆ, ದೊಡ್ಡಸಿದ್ದವ್ವನಹಳ್ಳಿ, ಇಂಗಳದಾಳು ಗ್ರಾಮ ಪಂಚಾಯಿತಿ ಸಾರ್ವಜನಿಕರು ಸಹಾಯಕ ಇಂಜಿನಿಯರ್ ಘಟಕ-3, ನಗರ ಉಪವಿಭಾಗ, ಚಿತ್ರದುರ್ಗ ಮೊಬೈಲ್ ನಂ.9449876221 ಸಂಪರ್ಕಿಸಬಹುದು. ಪಿಳ್ಳೆಕೇರನಹಳ್ಳಿ, ಮೆದೇಹಳ್ಳಿ, ಮಠದಕುರುಬರಹಟ್ಟಿ, ಐನಹಳ್ಳಿ, ಮುದ್ದಾಪುರ, ಗುಡ್ಡದರಂಗವ್ವನಹಳ್ಳಿ, ಮಾಡನಾಯಕನಹಳ್ಳಿ, ಚಿಕ್ಕಗೊಂಡನಹಳ್ಳಿ, ಗೋನೂರು ಗ್ರಾಮ ಪಂಚಾಯಿತಿ ವ್ಯಾಪ್ತಿ ಸಾರ್ವಜನಿಕರು ಸಹಾಯಕ ಇಂಜಿನಿಯರ್ ಘಟಕ-1, ನಗರ ಉಪವಿಭಾಗ, ಚಿತ್ರದುರ್ಗ ಮೊಬೈಲ್ ನಂ.9449876237 ಸಂಪರ್ಕಿಸಬಹುದು.

### ನಿರ್ವಹಣೆ ಪರಿಣಾಮಕಾರಿಯಾಗಿರಲಿ; ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್

# ಆನಾರೋಗ್ಯ ರಕ್ಷಣೆಗಾಗಿ ಕಸ ಸಂಗ್ರಹ

» ದಾವಣಗೆರೆ



ನಾವು ಆರೋಗ್ಯವಾಗಿರಲು ನಮ್ಮ ಮನೆ, ಮನಸ್ಸು ಸದಾ ಸ್ವಚ್ಛವಾಗಿರಬೇಕು. ಅದೇ ರೀತಿ ನಮ್ಮ ಪರಿಸರವು ಸದಾ ಸ್ವಚ್ಛವಾಗಿರಬೇಕಾಗಿದ್ದು ಇದಕ್ಕಾಗಿ ಕಸ ಸಂಗ್ರಹ ಹಾಗೂ ನಿರ್ವಹಣೆಯನ್ನು ಅಧಿಕಾರಿಗಳು ಎಚ್ಚೆತ್ತು ಪರಿಹಾರ ಕಂಡುಕೊಳ್ಳಬೇಕು ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಮಂಗಳವಾರ(ಸೆ.3) ಜಿಲ್ಲಾಡಳಿತ ಹಾಗೂ ಮಹಾನಗರಪಾಲಿಕೆ, ದಾವಣಗೆರೆ ಇವರ ಸಹಯೋಗದಲ್ಲಿ ನಗರದ ಹೋಟೆಲ್ ಪೂಜಾ ಇಂಟರ್ ನ್ಯಾಷನಲ್ ಹೋಟೆಲ್‌ನಲ್ಲಿ ಆಯೋಜಿಸಿಲಾಗಿದ್ದ ನೀರಿನ ನಿರ್ವಹಣೆ ಕುರಿತು ಏರ್ಪಡಿಸಲಾದ ಕಾರ್ಯಾಗಾರ ಉದ್ಘಾಟಿಸಿ ಮಾತಾನಾಡಿದರು. ನಮ್ಮ ದಾವಣಗೆರೆ ನಗರ ಸ್ವಚ್ಛವಾಗಿಡಲು ಎಲ್ಲರೂ ನಾಗರಿಕರು ಕೈಜೋಡಿಸಬೇಕು, ಸ್ವಚ್ಛ ಸರ್ವೇಕ್ಷಣೆಯಲ್ಲಿ ರಾಜ್ಯದಲ್ಲಿರುವ 10 ಮಹಾನಗರಪಾಲಿಕೆಗಳ ಪೈಕಿ ದಾವಣಗೆರೆ 4 ನೇ ಸ್ಥಾನವನ್ನು ಪಡೆದಿದೆ. 'ನನ್ನ ಜೀವನ, ನನ್ನ ಸ್ವಚ್ಛ ನಗರ' ಈ ಕಾರ್ಯಕ್ರಮವನ್ನು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿ ರಾಜ್ಯದ 6 ನಗರಗಳಲ್ಲಿ ನಮ್ಮ ದಾವಣಗೆರೆಯೂ ಕೂಡ ಒಂದಾಗಿದೆ ಎಂಬುವುದು ಹೆಮ್ಮೆಯ ವಿಷಯ, ಇನ್ನೂ ಪರಿಣಾಮಕಾರಿಯಾಗಿಸಲು ಪಾಲಿಕೆ ಸದಸ್ಯರು ಹಾಗೂ ಸಾರ್ವಜನಿಕರು ದಾವಣಗೆರೆ ನಗರವನ್ನು ಸ್ವಚ್ಛವಾಗಿಡಲು ಪ್ರಯತ್ನಿಸಬೇಕು ಎಂದರು.

ಸಾರ್ವಜನಿಕರಿಗೆ ಹಸಿಕಸ, ಒಣಕಸವನ್ನು ಬೇರ್ಪಡಿಸಬೇಕೆಂಬುದರ ಬಗ್ಗೆ ಜಾಗೃತಿ ಮೂಡಿಸಬೇಕು. ಖಾಲಿ ನಿವೇಶನದಲ್ಲಿ ಕಸ ಹಾಕುವುದರಿಂದ ಆ ಕಸವನ್ನು ಪ್ರಾಣಿಗಳು ತಿನ್ನುತ್ತವೆ. ಚಾನಲ್, ಚರಂಡಿಗಳಲ್ಲಿ ಕಸವನ್ನು ಹಾಕುತ್ತಿರುವ ಜನರಿಗೆ ಜಾಗೃತಿ ಮೂಡಿಸಬೇಕು. ಹಾಳು ಬಿದ್ದ ಕಟ್ಟಡ ಮಾಲೀಕರನ್ನು ಗುರುತಿಸಿ ಅದನ್ನು ಕೆಡವಿ ಅದರ ಸುತ್ತ ಕೌಂಪೌಂಡ್ ಕಟ್ಟಬೇಕು. ಬೀದಿಬದಿ ವ್ಯಾಪಾರಸ್ಥರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದೆ. ರಸ್ತೆಗಳಲ್ಲಿ ಜನರು ಓಡಾಡಲು ಸ್ಥಳವೇ ಇಲ್ಲದ ಹಾಗೇ ವ್ಯಾಪಾರ ಮಾಡುತ್ತಾ ಇರುತ್ತಾರೆ, ಆಸ್ಪತ್ರೆಯ ಹತ್ತಿರ ಇರುವ ಬೀದಿಬದಿ ವ್ಯಾಪಾರಸ್ಥರು ಅವರ ಅಂಗಡಿಗಳನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವಂತೆನೋಡಿಕೊಂಡುಅಂಗಡಿ ಮುಚ್ಚಲು ಸಮಯವನ್ನು ನಿಗಧಿಮಾಡಲು ತಿಳಿಸಿದರು. ಆಶಾಕಾರ್ಯಕರ್ತೆಯರು ಕಸದಿಂದ ರಸವೆಂಬ ಕಾರ್ಯಕ್ರಮವನ್ನು ಮಾಡುತ್ತಿದ್ದು, ಅವರನ್ನು ನಮ್ಮೊಂದಿಗೆ ಜೊತೆಯಾಗುವಂತೆ ತಿಳಿಸಬೇಕು. ಗ್ರಾಮೀಣ ಪ್ರದೇಶದಲ್ಲಿರುವ ಪಿಡಿಓ ಅವರು ಆರೋಗ್ಯ ಇಲಾಖೆಯಿಂದ 3 ತಿಂಗಳಗೊಮ್ಮೆ ನೀರನ್ನು ಪರಿಶೀಲಿಸಬೇಕು. ಕಸದ ಗಾಡಿಗಳಲ್ಲಿ ತುಂಬಿದ ಕಸವನ್ನು ರಸ್ತೆಗಳಲ್ಲಿ ಬೀಳಿಸುತ್ತಾ ಹೋಗುತ್ತಾರೆ, ಇದರ ಬಗ್ಗೆ ಪಾಲಿಕೆ ಅಧಿಕಾರಿಗಳು ಗಮನಿಸಬೇಕೆಂದು ತಿಳಿಸಿ 43 ನೇ ವಾರ್ಡ್ ಜೆ.ಹೆಚ್ ಪಟೇಲ್ ಬಡಾವಣೆಯ ಉದ್ಯಾನವನವನ್ನು ಸ್ವಚ್ಛ ಕಲಿಕಾ ಕೇಂದ್ರವನ್ನಾಗಿ ಮಾಡಬೇಕೆಂದರು.

ಜೋಳ್‌ದಾಳ್ ಗ್ರಾಮದಲ್ಲಿ ಕಲುಷಿತ ನೀರನ್ನು ಸೇವಿಸಿ ಕೆಲವು ಜನರು ಅಸ್ವಸ್ಥರಾಗಿದ್ದು, ಕೆಲವರಿಗೆ ತುಂಬಾ ತೊಂದರೆಯಾಗಿದೆ. ಅಲ್ಲಿ ಇರುವ ಕುಡಿಯುವ ನೀರಿನ ಪೈಪ್‌ಲೈನ್ ಚರಂಡಿಗೆ ಸಂಪರ್ಕಹೊಂದಿ ಸೇರಿದ್ದರಿಂದ ಕಲುಷಿತಗೊಂಡು ಈಗಾಗಿದ್ದು ಮುಂದಿನ ದಿನಗಳಲ್ಲಿ ಮರುಕಳಿಸದಂತೆ ಎಚ್ಚರ ವಹಿಸಲು ಸೂಚಿಸಲಾಗಿದೆ ಎಂದರು.

ಈ ಸಮಯದಲ್ಲಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ತಮ್ಮ ಮೊದಲ ತಿಂಗಳ ವೇತನವನ್ನು ವೈನಾಡು ಭೂಕುಸಿತ ದುರಂತದ ನಿರಾಶ್ರಿತರಿಗೆ ನೀಡಲು ಜಿಲ್ಲಾಧಿಕಾರಿಗಳಿಗೆ ಹಸ್ತಾಂತರಿಸಿದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ಹರಿಯಾಣ ಗುರುಗ್ರಾಮದಫೀಡ್‌ಬ್ಯಾಕ್‌ಫೌಂಡೇಶನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಜಯ್ ಸಿನ್ಹಾ ಮಾಹಿತಿ ನೀಡಿದರು.

ಮಹಾನಗರಪಾಲಿಕೆ ಮಹಾಪೌರರಾದ ವಿನಾಯಕ್ ಬಿ.ಹೆಚ್, ಉಪಮಹಾಪೌರರಾದ ಯಶೋಧ ಹೆಗ್ಗಪ್ಪ, ಪಾಲಿಕೆ ಆಯುಕ್ತೆ ರೇಣುಕಾ, ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕರಾದ ಡಾ.ಎನ್ ಮಹಾಂತೇಶ್, ಕೆಯುಐಡಿ ಮುಖ್ಯಸ್ಥರಾದ ವೀರೇಂದ್ರ ಕುಂದಗೋಳ ಉಪಸ್ಥಿತರಿದ್ದರು.

### ಮಾಯಕೊಂಡ ಗುಡ್ಡದಹಳ್ಳಿಗೆ ಕೆ.ಎಸ್.ಆರ್.ಟಿ.ಸಿ.ಬಸ್ ಸೌಕರ್ಯ

# ಗ್ರಾಮೀಣ ಮೂಲ ಸೌಕರ್ಯಕ್ಕೆ ಒತ್ತು; ಡಾ;ಪ್ರಭಾ

» ದಾವಣಗೆರೆ

ಮಕ್ಕಳ ಭವಿಷ್ಯ ಉಜ್ವಲವಾಗಲು ಅವರಿಗೆ ಸರಿಯಾದ ಶಿಕ್ಷಣ ಲಭಿಸಿ ಉತ್ತಮ ಆರೋಗ್ಯ ಸಂರಕ್ಷಣೆ ಸಿಕ್ಕಾಗ ಅವರ ಸಂಪೂರ್ಣ ಅಭಿವೃದ್ಧಿಯಾಗಲಿದೆ. ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಕ್ಷೇತ್ರ ಸಂಚರಿಸಿ ಶಾಲೆ, ಗ್ರಾಮದ ಮೂಲಭೂತ ಸೌಕರ್ಯದ ಕಡೆ ಹೆಚ್ಚು ಗಮನಿಸುತ್ತೇನೆ ಎಂದು ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.



ಅವರು ಮಾಯಕೊಂಡ ಕ್ಷೇತ್ರದ ಗುಡ್ಡದಹಟ್ಟಿಯಲ್ಲಿ ಕೆ.ಎಸ್.ಆರ್.ಟಿ.ಸಿ.ಯಿಂದ ನೂತನ ಬಸ್ ಸಂಚಾರಕ್ಕೆ ಚಾಲನೆ ನೀಡಿ ಸಮಾರಂಭದಲ್ಲಿ ಮಾತನಾಡಿದರು. ಗ್ರಾಮೀಣ ಭಾಗದಲ್ಲಿನ ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಶಿಕ್ಷಣ ಸಿಗಬೇಕು. ಇದು ಲಭಿಸಿದಾಗ ಅವರ ಶಿಕ್ಷಣಕ್ಕೆ ಸರಿಯಾದ ಅಡಿಪಾಯ ಹಾಕಿದಂತಾಗುತ್ತದೆ. ಇದರ ಜೊತೆಗೆ ಗ್ರಾಮೀಣ ಪ್ರದೇಶದ ಮಕ್ಕಳು ಸೇರಿದಂತೆ ಜನರಿಗೆ ಆರೋಗ್ಯ ಸೌಕರ್ಯಗಳು ಸಿಗಬೇಕೆಂದು ತಿಳಿಸಿದರು.

ಸರ್ಕಾರಿ ಶಾಲೆಯಲ್ಲಿ ಮೂಲಭೂತ ಸೌಕರ್ಯ ಇನ್ನೂ ಅಗತ್ಯವಾಗಿದೆ, ಸರ್ಕಾರಿ ಶಾಲೆಯಲ್ಲಿ ಓದಿದವರು ಅನೇಕ ಉನ್ನತ ಹುದ್ದೆ, ಸ್ಥಾನದಲ್ಲಿದ್ದಾರೆ. ಈ ಎಲ್ಲಾ ಹಳೆ ವಿದ್ಯಾರ್ಥಿಗಳನ್ನು ಒಂದುಗೂಡಿಸಿ ಶಾಲಾಭಿವೃದ್ಧಿ ಮಾಡಲು ಎಸ್.ಡಿ.ಎಂ.ಸಿ.ಯವರು ಹಳೆ ವಿದ್ಯಾರ್ಥಿಗಳ ಸಂಘ ಸ್ಥಾಪನೆ ಮಾಡುವ ಮೂಲಕ ಅವರಿಂದ ಆರ್ಥಿಕ ಸಹಕಾರ, ಸಲಹೆಗಳನ್ನು ಪಡೆದು ತಮ್ಮ ಶಾಲೆಯ ಕೊಠಡಿ, ಶಾಲಾಭಿವೃದ್ಧಿ ಮಾಡಬಹುದಾಗಿದೆ. ಸರ್ಕಾರಿ ಶಾಲೆಯ ಶಿಕ್ಷಕರು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇಮಕಾತಿ ಹೊಂದುವುದರಿಂದ ಇವರು ಉತ್ತಮ ಶಿಕ್ಷಕರಾಗಿರುವರು. ಶಿಕ್ಷಕರ ಸದ್ಬಳಕೆಯಿಂದ ಮಕ್ಕಳ ಶೈಕ್ಷಣಿಕ ಅಭಿವೃದ್ಧಿ ಮತ್ತು ಶಾಲೆಯ ಮೂಲಭೂತ ಸೌಕರ್ಯದ ಅಭಿವೃದ್ಧಿ ಮಾಡುವಲ್ಲಿ ಗ್ರಾಮಸ್ಥರ ಪಾತ್ರ ಬಹಳ ಮುಖ್ಯವಾಗಿರುತ್ತದೆ ಎಂದರು. ಕ್ಷೇತ್ರದ ಜನರ ಹಾಗೂ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲು ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿ ಸಂಸದರ ಕಚೇರಿಯನ್ನು ಆರಂಭಿಸಲಾಗಿದ್ದು ಜನರು ಇಲ್ಲಿಗೆ ಬಂದು ಯಾವುದೇ ಹಿಂಜರಿಕೆ ಇಲ್ಲದೆ ತಮ್ಮ ಕುಂದುಕೊರತೆಗಳ ಅಹವಾಲುಗಳನ್ನುನೀಡಬಹುದಾಗಿದೆ.ಮುಂದಿನ ದಿನಗಳಲ್ಲಿ ನಾನು ಸಹ ದಾವಣಗೆರೆಯಲ್ಲಿರದೆ ಕ್ಷೇತ್ರದಲ್ಲಿ ಸಂಚರಿಸುವ ಮೂಲಕ ಜನರ ಅಹವಾಲುಗಳನ್ನು ಆಲಿಸಿ ಪರಿಹಾರಿಸಲಾಗುತ್ತದೆ ಎಂದರು. ಗುಡ್ಡದಹಳ್ಳಿಗೆ ಬಸ್ ಬೇಡಿಕೆ ಸಾಕಷ್ಟು ದಿನಗಳಿಂದ ಇದ್ದು ಇದನ್ನು ಪರಿಹರಿಸಲಾಗಿದೆ. ಮಾಯಕೊಂಡ ರಸ್ತೆ ಅಭಿವೃದ್ಧಿಯಾಗಬೇಕೆಂದು ಜನರು ಕೇಳುತ್ತಿದ್ದು ರಸ್ತೆ ನಿರ್ಮಾಣಕ್ಕೆ ರೂ.8 ಕೋಟಿ ಮಂಜೂರಾಗಿದ್ದು ಮುಂದಿನ ದಿನಗಳಲ್ಲಿ ಕೆಲಸ ಪ್ರಾರಂಭವಾಗಲಿದೆ ಎಂದರು.

ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ಮಾತನಾಡಿ ಗುಡ್ಡದಹಳ್ಳಿ ತಾಲ್ಲೂಕಿನ ಕೊನೆಯ ಭಾಗದಲ್ಲಿದ್ದು ಇಲ್ಲಿಗೆ ಬಸ್ ಸಂಪರ್ಕವಿಲ್ಲದೆ ಜನರಿಗೆ ಸಾಕಷ್ಟು ಅನಾನುಕೂಲವಾಗಿತ್ತು. ಬಸ್ ಸೌಕರ್ಯ ಕಲ್ಪಿಸಿದ್ದರಿಂದ ಗ್ರಾಮದಲ್ಲಿ ಹಬ್ಬದ ವಾತಾವರಣ ಮೂಡಿದೆ. ಭಾವಿಹಾಳ್ ಮೂಲಕ ಗುಡ್ಡದಹಳ್ಳಿ, ನರಗನಹಳ್ಳಿ ಮೂಲಕ ದಾವಣಗೆರೆಗೆ ಪ್ರಯಾಣಿಸಬಹುದು. ಈ ಬಸ್ ಗ್ರಾಮಕ್ಕೆ ಬೆಳಗ್ಗೆ 8.45 ಕ್ಕೆ ಬರಲಿದ್ದು ಮಧ್ಯಾಹ್ನ 1.30 ಕ್ಕೆ ದಾವಣಗೆರೆಯಿಂದ ಗ್ರಾಮಕ್ಕೆ ಮತ್ತು ಸಂಜೆ 4 ಗಂಟೆಗೆ ದಾವಣಗೆರೆಯಿಂದ ಬಾವಿಹಾಳ್ ಮಾರ್ಗವಾಗಿ ಗುಡ್ಡದಹಳ್ಳಿ ತಲುಪಲಿದೆ. ಶಾಲಾ, ಕಾಲೇಜಿನ ವಿದ್ಯಾರ್ಥಿಗಳು ಹಾಗೂ ತಾಯಂದಿರು ಮೊದಲನೆಯದಾಗಿ ಈ ಸೌಲಭ್ಯ ಪಡೆಯುವಂತಾಗಲಿ ಎಂದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಮಾತನಾಡಿ ಗ್ರಾಮದಲ್ಲಿ ಸ್ವಚ್ಚತೆಗೆ ಆದ್ಯತೆ ನೀಡಬೇಕು, ಎಲ್ಲೆಂದರಲ್ಲಿ ಹಾಕಿರುವ ಪ್ಲಾಸ್ಟಿಕ್ ತೆಗೆದು ಸ್ವಚ್ಚತೆ ಕಾಪಾಡಬೇಕು. ಗ್ರಾಮಕ್ಕೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಶಾಸಕರು, ಸಂಸದರು ಕಲ್ಪಿಸಲಿದ್ದು ತಾವುಗಳು ಗ್ರಾಮವನ್ನು ಸಂಪೂರ್ಣವಾಗಿ ಸ್ವಚ್ಛವಾಗಿಟ್ಟುಕೊಳ್ಳಬೇಕೆಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಜಿ.ಕೊಟ್ರೇಶ್, ಕೆ.ಎಸ್. ಆರ್.ಟಿ.ಸಿ. ವಿಭಾಗೀಯ ನಿಯಂತ್ರಕರಾದ ಸಿದ್ದೇಶ್ ಹೆಬ್ಬಾಳ್, ತಹಶೀಲ್ದಾರ್ ಡಾ; ಅಶ್ವಥ್, ಕಾರ್ಯನಿರ್ವಾಹಕ ಅಧಿಕಾರಿ ರಾಮಭೋವಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಆಶಾ ನಾಗರಾಜ್ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಷ್ಟ್ರೀಯ ಹೆದ್ದಾರಿ ಸರ್ವೀಸ್ ರಸ್ತೆ ಪೂರ್ಣಗೊಳಿಸಲು ಸೂಚನೆ



» ದಾವಣಗೆರೆ

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಷಟ್ಪಥ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸುವ ಕೆಲಸ ದಾವಣಗೆರೆ ಕೆಲವು ಭಾಗದಲ್ಲಿ ಮಾತ್ರ ಬಾಕಿ ಇದ್ದು ಇದರಿಂದ ವಾಹನ ಸವಾರರಿಗೆ ಸಮಸ್ಯೆಯಾಗುತ್ತಿದೆ. ಇದರಿಂದ ಅಪಘಾತಗಳು ಸಂಭವಿಸಬಹುದಾಗಿದ್ದು ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸಬೇಕೆಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚನೆ ನೀಡಿದರು. ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ದಾವಣಗೆರೆ ನಗರಕ್ಕೆ ಹೊಂದಿಕೊಂಡಂತೆ ಹಾಗೂ ಕುಂದುವಾಡ ಬ್ರಿಡ್ಜ್, ಅಗಸನಕಟ್ಟೆ ಬಳಿ ಸರ್ವೀಸ್ ರಸ್ತೆ ಬಾಕಿ ಇದ್ದು ರೈತರು ಅಡ್ಡಿಪಡಿಸುತ್ತಿದ್ದಾರೆ ಎಂದು ತಿಳಿಸಿದ್ದು ಕಾನೂನು ಪ್ರಕಾರ ರೈತರಿಗೆ ಸಿಗಬೇಕಾದ ಪರಿಹಾರದ ಮೊತ್ತವನ್ನು ಪಾವತಿಸಿ ಅಥವಾ ಠೇವಣಿ ಇಟ್ಟು ಕಾಮಗಾರಿ ಮುಂದುವರೆಸಲು ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ತಿಳಿಸಿ ಅಗತ್ಯವಿದ್ದಲ್ಲಿ ಪೊಲೀಸ್ ರಕ್ಷಣೆ ಒದಗಿಸಿಕೊಡಲಾಗುತ್ತದೆ ಎಂದರು. ಸರ್ವೀಸ್ ರಸ್ತೆ ಕಾಮಗಾರಿ ಬಾಕಿ ಇರುವುದರಿಂದ ಅಪಘಾತಗಳು ಹೆಚ್ಚು ಸಂಭವಿಸಬಹುದಾಗಿದ್ದು ಆದಷ್ಟು ಬೇಗ ಕಾಮಗಾರಿ ಮುಕ್ತಾಯ ಮಾಡಲು ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ, ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್, ತಹಸಿಲ್ದಾರ್ ಅಶ್ವಥ್, ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಶಿವಕುಮಾರ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಸಾರಿಗೆ ಪ್ರಾಧಿಕಾರ ಸಭೆ

**ಚಿತ್ರದುರ್ಗ:** ಸೆಪ್ಟೆಂಬರ್ 18 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಪ್ರಾದೇಶಿಕ ಸಾರಿಗೆ ಕಚೇರಿ ಸಭಾಂಗಣದಲ್ಲಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆಯನ್ನು ಆಯೋಜಿಸಲಾಗಿದೆ. ಕರ್ನಾಟಕ ಉಚ್ಚನ್ಯಾಯಾಲಯ ಹಾಗೂ ಕೆಎಸ್‌ಟಿಎಟಿ ಮರುಪರಿಗಣನೆಗೆ ಸ್ವೀಕೃತವಾದ ವಿಷಯಗಳು ಹಾಗೂ ಖಾಸಗಿ ಕಾರ್ಯಕರ್ತರು ಸಲ್ಲಿಸಿರುವ ರಹದಾರಿ ವರ್ಗಾವಣೆ, ವ್ಯತ್ಯಯ ಹಾಗೂ ಇನ್ನಿತರ ವಿಷಯಗಳನ್ನು ಇತ್ಯರ್ಥಪಡಿಸುವ ಸಲುವಾಗಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಸಭೆ ಆಯೋಜಿಸಲಾಗಿದೆ.

## ಪ್ರಮುಖ ಸುದ್ದಿ

# ನಗರ ವ್ಯಾಪ್ತಿಯ ಬಿ.ಖಾತೆ ಮನೆಗಳ ಇ-ಸ್ವತ್ತು ನೀಡಲು ಆಗ್ರಹ

» ಚಿತ್ರದುರ್ಗ

ನಗರ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯಿತಿಗಳು ಎರಡು ವರ್ಷಗಳ ಹಿಂದೆ 11 ಬಿ ಖಾತೆ ಹೊಂದಿರುವ ನಿವೇಶನಗಳು ಹಾಗೂ ಮನೆಗಳ ಇ-ಸ್ವತ್ತುಗಳನ್ನು ನೀಡುವ ಕಡತಗಳನ್ನು ನಗರಸಭೆ ಪೌರಾಯುಕ್ತರಿಗೆ ವರ್ಗಾಯಿಸಿದ್ದರೂ ಇದುವರೆವಿಗೂ 11 ಬಿ ಖಾತೆಯುಳ್ಳವರಿಗೆ ನಿವೇಶನಗಳು ಮತ್ತು ಮನೆಗಳಿಗೆ ಇ-ಸ್ವತ್ತು ನೀಡದೆ ಸತಾಯಿಸುತ್ತಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದಿಂದ ಮಂಗಳವಾರ ಜಿಲ್ಲಾಡಳಿತ ಹಾಗೂ ನಗರಸಭೆಗೆ ಮನವಿ ಸಲ್ಲಿಸಲಾಯಿತು.




ಸಾರ್ವಜನಿಕರು ಇ-ಸ್ವತ್ತುಗಳನ್ನು ಪಡೆಯಲು ನಗರಸಭೆಗೆ ಅಲೆದು ಸಾಕಾಗಿದ್ದಾರೆ. ಇ-ಸ್ವತ್ತು ಇಲ್ಲದಿದ್ದರೆ ಅಂತಹ ನಿವೇಶನಗಳಿಗೆ ಸಾಲ ಸೌಲಭ್ಯ ಸಿಗುವುದಿಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸಗಳು ವಿಳಂಭವಾಗುತ್ತಿವೆ ಎಂದು ಪ್ರತಿಭಟನಾಕಾರರು ಆಪಾದಿಸಿದರು.

ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಮೇಲೆ ಆಗುತ್ತಿರುವ ದೌರ್ಜನ್ಯ, ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣ, ಜಮೀನು ವಿವಾದ, ಮೀಸಲಾತಿ ಇನ್ನಿತರೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಎಸ್ಸಿ. ಎಸ್ಟಿ.ಗಳಿಗೆ ಸಾಮಾಜಿಕ ನ್ಯಾಯ ಒದಗಿಸುವುದಕ್ಕಾದರೂ ಆಯೋಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡಬೇಕು. ರಾಜ್ಯಾದ್ಯಂತ 1727 ಪ್ರಕರಣಗಳು ಬಾಕಿಯಿದ್ದು, ಎಲ್ಲವೂ ಇತ್ಯರ್ಥಗೊಳ್ಳಬೇಕೆಂದು ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೂ ಪ್ರತಿಭಟನಾಕಾರರು ಮನವಿ ಅರ್ಪಿಸಿದರು.

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಜೆ.ಮಂಜುನಾಥ್, ರಾಜ್ಯಪ್ರಧಾನಕಾರ್ಯದರ್ಶಿ ವೈ.ಕುಮಾರ್, ಉಪಾಧ್ಯಕ್ಷರುಗಳಾದ ಕೆ.ಗೌಸ್‌ಪೀರ್, ನರಸಿಂಹಸ್ವಾಮಿ ಎಂ.ಆರ್. ಖಜಾಂಚಿ ಡಿ.ಈಶ್ವರಪ್ಪ, ಚಾಂದ್‌ಪೀರ್, ಇಮಾಂ ಮೈಹಿಮುದ್ದೀನ್, ಪ್ರಸನ್ನ, ರಾಜಪ್ಪ, ಗೌಸ್‌ಖಾನ್, ರಫೀಕ್, ರಾಜಣ್ಣ, ಸಲೀಂ, ಇಬಾದುಲ್ಲಾ, ತಿಮ್ಮಯ್ಯ ಎಂ. ಮಹಾಂತಪ್ಪ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಯಾರ ಬೆನ್ನಿಗೆ ಚೂರಿ.....



- **ಮತದಾರನ ಬೆನ್ನಿಗೆ - ಪ್ರಜಾಪ್ರಭುತ್ವದ ಹೃದಯಕ್ಕೆ - ಮನುಷ್ಯತ್ವದ ನಂಬಿಕೆಗೆ -**
- **ಸಮಾಜದ ಋಣಕ್ಕೆ -**
- **ಸ್ವಾತಂತ್ರ್ಯದ ತ್ಯಾಗಕ್ಕೆ.......**
- **ಆಪರೇಷನ್ ಹಸ್ತ - ಆಪರೇಷನ್ ಕಮಲ -..........**
- **ಆಪರೇಷನ್ ಸಕ್ಸಸ್ - ಪೇಷಂಟ್ ಡೆಡ್.....**
- **ಅಧಿಕಾರದ ದಾಹಕ್ಕಾಗಿ - ಮೋಹಕ್ಕಾಗಿ - ಸ್ವಾರ್ಥಕ್ಕಾಗಿ ಕುದುರೆ ವ್ಯಾಪಾರ ಯಾರೇ ಮಾಡಲಿ ನಮ್ಮ ವಿರೋಧದ ಧ್ವನಿ ಸದಾ ಇರುತ್ತದೆ ಪಕ್ಷಾತೀತವಾಗಿ. ಸಮರ್ಥನೆಯ ಪ್ರಶ್ನೆಯೇ ಇಲ್ಲ....**

ಅವರಿಗೆ ಅಧಿಕಾರದ ಮೌಲ್ಯ ಮುಖ್ಯ. ನಮಗೆ ಪ್ರಾಕೃತಿಕ ಮೌಲ್ಯ, ಮಾನವೀಯ ಮೌಲ್ಯ, ಪ್ರಜಾಪ್ರಭುತ್ವದ ಮೌಲ್ಯ,

ಭಾರತೀಯ ನೈತಿಕ ಮೌಲ್ಯಗಳು ಮುಖ್ಯ.....

ಕೆಂಪು ಕೋಟೆಯ ಮೇಲೆ ರಾಷ್ಟ್ರಧ್ವಜ ಹಾರಿಸಿ ಭ್ರಷ್ಟಾಚಾರದ ಬಗ್ಗೆ ಭಾಷಣ ಮಾಡುವ ನರೇಂದ್ರ ಮೋದಿಯವರೇ ಆಗಿರಲಿ, ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಭಾರತ್ ಜೋಡೋ ಯಾತ್ರೆ ಮಾಡಿ ಮೌಲ್ಯಗಳ ಬಗ್ಗೆ ಮಾತನಾಡುವ ರಾಹುಲ್ ಗಾಂಧಿಯವರೇ ಇರಲಿ ನಮ್ಮ ನಿಲುವು ಮಾತ್ರ ಸತ್ಯದ ಪರ....

ಶಾಸಕರೆಂಬ ವ್ಯಾಪಾರದ ಕುದುರೆಗಳನ್ನು ( ಖರೀದಿಯಾಗುವವರಿಗೆ ಮಾತ್ರ ಅನ್ವಯ ) ಮಾರುಕಟ್ಟೆಯಲ್ಲಿ ಖರೀದಿಸಿ ಸರ್ಕಾರ ಮಾಡುವ ಯಾವುದೇ ಪಕ್ಷದ ನಾಯಕರು ತ್ರಿವರ್ಣ ಧ್ವಜವನ್ನು ಹಾರಿಸುವ ಅಥವಾ ದೇಶದ ಜನರಿಗೆ ಮೌಲ್ಯಗಳ ಬಗ್ಗೆ ಮಾತನಾಡುವ ನೈತಿಕತೆಯನ್ನೇ ಕಳೆದುಕೊಳ್ಳುತ್ತಾರೆ.....

ಸದ್ಯದ ರಾಜಕೀಯದ ಬಹುತೇಕ ನಾಯಕರು ಮುಖವಾಡದ ಮರೆಯಲ್ಲಿ ಅವಿತಿರುವ ನರಿಗಳು ಅಥವಾ ಊಸರವಳ್ಳಿಗಳು.....

ನಾವು ಯೋಚಿಸಿ ಮತ ಹಾಕುವುದು ಯಾವ ಪಕ್ಷದ ಅಭ್ಯರ್ಥಿಗೋ, ಅವರು ಗೆದ್ದ ನಂತರ ಸೇರುವುದು ಮತ್ಯಾವ ಪಕ್ಷವೋ, ಮತ್ತೆ ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸುವುದು ಇನ್ಯಾವೋ ಪಕ್ಷವೋ ಇಂತಹ ಸಾಮಾನ್ಯ ಪರಿಸ್ಥಿತಿಯಲ್ಲಿ ನಾವು ಮತದಾನ ಪವಿತ್ರ ದಾನ ಎಂದು ಪ್ರಚಾರ ಮಾಡುವುದು ಯಾವ ಸಾಧನೆಗಾಗಿ........

ಭಾರತದ ಚುನಾವಣಾ ಆಯೋಗ ಸಚಿನ್ ತೆಂಡೂಲ್ಕರ್ ಅವರನ್ನು ಇಡೀ ದೇಶದ ಚುನಾವಣಾ ರಾಯಭಾರಿಯಾಗಿ ಆಯ್ಕೆ ಮಾಡಿದೆ ಮತದಾರರನ್ನು ಜಾಗೃತ ಮಾಡಲು. ಪಾಪ ಅವರು ಒಬ್ಬ ಬಲಿಪಶುವಿನ ರೀತಿ ಕಾಣುತ್ತಿದ್ದಾರೆ. ಅತ್ಯಂತ ಸಣ್ಣ ವಯಸ್ಸಿನಿಂದಲೇ ಕ್ರಿಕೆಟ್ ಆಟ ಪ್ರಾರಂಭಿಸಿ ಕ್ರಿಕೆಟ್ ದೇವರು ಎಂದು ಕ್ರಿಕೆಟ್ ಅಭಿಮಾನಿಗಳಿಂದ ಕರೆಸಿಕೊಳ್ಳುವ ಜಗತ್ತಿನ ವಿಖ್ಯಾತ ಕ್ರಿಕೆಟರ್ ಭಾರತ ರತ್ನ ತೆಂಡೂಲ್ಕರ್ ಇಲ್ಲಿಯವರೆಗೆ ಕ್ರಿಕೆಟ್ ಹೊರತುಪಡಿಸಿದ ವಿಷಯಗಳಲ್ಲಿ ಎಷ್ಟು ಓದಿದ್ದಾರೆ. ಯಾವ ಅಧ್ಯಯನ ಮಾಡಿದ್ದಾರೆ. ಭಾರತದ ಮಣ್ಣಿನ ಗುಣ, ಭಾರತೀಯರ ಮನಸ್ಥಿತಿ, ಚುನಾವಣಾ ಶೈಲಿಯ ಬಗ್ಗೆ ಅವರಿಗೆ ಎಷ್ಟು ಮಾಹಿತಿ ಇದೆ ಎಂಬುದು ಚರ್ಚಿಸಬೇಕಾದ ವಿಷಯ. ಆದರೆ ಅವರಿಗೆ ಈ ಮೂಲಕ ಒಂದು ಮನವಿ.....

ಮಾನ್ಯ ತೆಂಡೂಲ್ಕರ್ ಅವರೇ ವಿಶ್ವದ ಅತ್ಯಂತ ದೊಡ್ಡ ಪ್ರಜಾಪ್ರಭುತ್ವದ ಮತ್ತು ಒಂದು ರೀತಿಯ ವೈವಿಧ್ಯಮಯ ಮಿನಿ ವಿಶ್ವ ಈ ಭಾರತ. ಇಲ್ಲಿ ಸರಿ ಸುಮಾರು ಹತ್ತಿರ ಹತ್ತಿರ 100 ಕೋಟಿ ( ಸದ್ಯ 90 ಕೋಟಿ ಇರಬಹುದು ) ಮತದಾರರು ಇದ್ದಾರೆ. ಅವರನ್ನೆಲ್ಲಾ ಹೇಗೆ ಜಾಗೃತ ಗೊಳಿಸುವಿರಿ. ಯಾವ ಯಾವ ಅಂಶಗಳನ್ನು ಅವರಿಗೆ ಮನವರಿಕೆ ಮಾಡಿಕೊಡುವಿರಿ. ವಿಭಿನ್ನ ಭಾಷೆಯ, ವಿಭಿನ್ನ ಧರ್ಮದ, ವಿಭಿನ್ನ ಜಾತಿಯ, ವಿಭಿನ್ನ ಪ್ರದೇಶದ, ವಿಭಿನ್ನ ಸಂಸ್ಕೃತಿಯ, ವಿಭಿನ್ನ ಆರ್ಥಿಕ ಶೈಕ್ಷಣಿಕ ವರ್ಗದ ಜನರನ್ನು ಮನವೊಲಿಸುವ ಮಾನದಂಡಗಳೇನು.......

" ಮತದಾನ ಒಂದು ಪವಿತ್ರ ಕರ್ತವ್ಯ. ಮತ ಹಾಕಿ ಪ್ರಜಾಪ್ರಭುತ್ವ ಉಳಿಸಿ " ಎನ್ನಬಹುದು ಅಥವಾ " ನಮ್ಮ ಮತ ಮಾರಾಟಕ್ಕಿಲ್ಲ. ಒಳ್ಳೆಯವರಿಗೆ ಮತ ಹಾಕೋಣ " ಎನ್ನಬಹುದು

" ಮತ ನಮ್ಮ ಹಕ್ಕು ಅದನ್ನು ಚಲಾವಣೆ ಮಾಡೋಣ " ಎನ್ನಬಹುದು, ಹೀಗೆ ನಾನಾ ರೀತಿಯ ಘೋಷವಾಕ್ಯ ಉಚ್ಚರಿಸಬಹುದು. ಆದರೆ ನಿಜವಾಗಿಯೂ ವಾಸ್ತವದಲ್ಲಿ ಜಾಗೃತರಾಗಬೇಕಿರುವುದು ಮತದಾರರು ಮಾತ್ರವಲ್ಲ ಚುನಾವಣೆಯಲ್ಲಿ ಆಯ್ಕೆಯಾದ ಜನ ಪ್ರತಿನಿಧಿಗಳು ....

" ಪ್ರಜಾಪ್ರಭುತ್ವ ಉಳಿಯುವುದು ಮತದಾರನ ಮತದಾನದಿಂದ ಅಲ್ಲ, ಅವರಿಂದ ಆಯ್ಕೆಯಾದ ಪ್ರತಿನಿಧಿಗಳು ತಮ್ಮ ಕರ್ತವ್ಯ ಮತ್ತು ಜವಾಬ್ದಾರಿಯನ್ನು ದಕ್ಷತೆ ಹಾಗು ಪ್ರಾಮಾಣಿಕತೆಯಿಂದ ನಿರ್ವಹಿಸಿದಾಗ "ಹೌದು ಮತದಾನ ಚುನಾವಣಾ ಪ್ರಕ್ರಿಯೆಯ ಒಂದು ಮುಖ್ಯ ಭಾಗ ಎಂಬುದು ನಿಜ. ಮತದಾರರು ತಮ್ಮ ಪ್ರತಿನಿಧಿಯನ್ನು ತಮ್ಮ ಮತದ ಮೂಲಕ ಆಯ್ಕೆ ಮಾಡಿಕೊಳ್ಳುತ್ತಾರೆ. ಯಾರೇ ಆಯ್ಕೆಯಾದರು ಅವರು ಅವರ ಇಷ್ಟದಂತೆ ಅಧಿಕಾರ ನಡೆಸಲು ಸಾಧ್ಯವಿಲ್ಲ ಮತ್ತು ಆಯ್ಕೆಯಾದ ವ್ಯಕ್ತಿಗೆ ಆ ಕ್ಷೇತ್ರವನ್ನು ಗುತ್ತಿಗೆ ನೀಡಿದಂತೆ ಆಗುವುದಿಲ್ಲ. ಆತನು ಸಹ ಸಂವಿಧಾನಾತ್ಮಕ ನಿಯಮಾವಳಿಗಳ ಪ್ರಕಾರವೇ ಆಡಳಿತ ನಡೆಸಬೇಕು...

ಭಾರತದಲ್ಲಿ ಇರುವುದು ಬಹುಪಕ್ಷೀಯ ಸಂಸದೀಯ ಪ್ರಜಾಪ್ರಭುತ್ವ. ಯಾರು ಬೇಕಾದರೂ ಚುನಾವಣೆಗೆ ಸ್ಪರ್ಧಿಸಬಹುದು. ಒಂದು ವೇಳೆ ಚುನಾವಣೆಯಲ್ಲಿ A or B or C or ಆ....... ಯಾರೇ ಆಯ್ಕೆಯಾಗಲಿ ನೀತಿ ನಿಯಮಗಳಿಗೆ ಹೊರತಾಗಿ ಅಂತಹ ದೊಡ್ಡ ವ್ಯತ್ಯಾಸ ಆಗಬಾರದು. ಕಾನೂನಿನ ಅಡಿಯಲ್ಲಿಯೇ ಎಲ್ಲರೂ ಕಾರ್ಯನಿರ್ವಹಿಸಬೇಕು.....

ಚುನಾವಣಾ ಫಲಿತಾಂಶ ಪ್ರಕಟವಾದ ನಂತರ ಗೆದ್ದ ಅಭ್ಯರ್ಥಿಯ ಅಭಿಮಾನಿಗಳು ಅಥವಾ ಆಯಾ ಪಕ್ಷದ ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಿಸುವುದನ್ನು ನೋಡಿದಾಗ ಭ್ರಷ್ಟಾಚಾರದ ಮೂಲ ಬೇರುಗಳನ್ನು ಗುರುತಿಸಬಹುದು. ಗೆದ್ದ ವ್ಯಕ್ತಿ ನಮ್ಮ ಸ್ನೇಹಿತರೋ ಪರಿಚಿತರೋ ಆಗಿದ್ದರೆ ಆತ ನಮಗೆ ಲಾಭ ಮಾಡಿ ಕೊಡುತ್ತಾನೆ ಮತ್ತು ಆತನೂ ಲಾಭ ಮಾಡಿಕೊಳ್ಳುತ್ತಾನೆ ಎಂಬುದು ಬಹಿರಂಗ ಸತ್ಯವಾಗಿರುವಾಗ ಪ್ರಜಾಪ್ರಭುತ್ವ ಮತ್ತು ಕಾನೂನು ಒಂದು ರೀತಿಯ ಅಣಕು ವ್ಯವಸ್ಥೆ ಎಂದೆನಿಸುತ್ತದೆ.....

ಕಳ್ಳನೊಬ್ಬ ದರೋಡೆ ಮಾಡಲು ಸನ್ಯಾಸಿಯ ವೇಷ ಧರಿಸುವುದು, ಅದು ತಿಳಿದಿದ್ದರು ಮನೆಯ ಒಡೆಯ ಅವನಿಗೆ ಮಂಗಳಾರತಿ ಮಾಡಿ ಮನೆಗೆ ಸ್ವಾಗತಿಸುವುದು, ಕಳ್ಳ ಕಳ್ಳತನದ ಹಣವನ್ನು ನಮಗೆ ನೀಡುತ್ತಾನೆ ಎಂದು ಮನೆ ಒಡೆಯ ನಿರೀಕ್ಷಿಸುವುದು, ನಂತರ ಕಳ್ಳ ಸ್ವಲ್ಪ ಹಣ ಕೊಟ್ಟಂತೆ ಮಾಡಿ ಕೊನೆಗೆ ಇಡೀ ಮನೆಯನ್ನು ದೋಚಿಕೊಂಡು ಹೋಗುವುದು, ಇದು ಅರ್ಥವಾದ ಮೇಲೆ ಮನೆಯ ಒಡೆಯ ಬಾಯಿ ಬಾಯಿ ಬಡಿದುಕೊಂಡು ರೋಧಿಸುವುದು ಎಲ್ಲವೂ ಒಂದು ನಾಟಕದಂತೆ ಕಾಣುತ್ತಿದೆ. ನಾವು ನೀವು ಈ ನಾಟಕದ ಪ್ರೇಕ್ಷಕರು.....

ಆದ್ದರಿಂದ ತೆಂಡೂಲ್ಕರ್ ಅವರು ನಿಜವಾಗಿಯೂ ಬದಲಾವಣೆ ಬಯಸುವ ಮನಸ್ಥಿತಿಯವರಾದರೆ ಜನ ಪ್ರತಿನಿಧಿಗಳ ರಾಯಭಾರಿಯಾಗಿ ಕಾರ್ಯನಿರ್ವಹಿಸಲಿ. ಅವರಿಗೆ ಪ್ರಾಮಾಣಿಕತೆಯ ಜಾಗೃತಿ ಮೂಡಿಸಲಿ. ಪಕ್ಷಾಂತರಿಗಳ ಮುಖವಾಡ ಕಳಚಲಿ. ಈ ನೆಲದ ಋಣ ತೀರಿಸಲಿ......

ಹಾಗೆಯೇ ಪಕ್ಷ ಮತ್ತು ಅಭ್ಯರ್ಥಿಗಳು ಯಾರೇ ಆಗಿರಲಿ ಮಾರಾಟವಾಗುವ ಜನ ಪ್ರತಿನಿಧಿಗಳನ್ನು ತಿರಸ್ಕರಿಸುವ ಮನೋಭಾವ ಮತ್ತು ಜಾಗೃತ ಪ್ರಜ್ಞೆ ಮತದಾರರಲ್ಲಿ ಮೂಡಲಿ. ಮಾಧ್ಯಮಗಳ ಬ್ರೇಕಿಂಗ್ ನ್ಯೂಸ್ ಬೆನ್ನಿಗೆ ಚೂರಿ ಹಾಕುವ ರಾಜಕಾರಣಿಗಳಲ್ಲ ಅವರನ್ನು ಸೋಲಿಸುವ ಮತದಾರರಾಗಲಿ ಎಂದು ಆಶಿಸುತ್ತಾ..........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತ ನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಸೆ.10ರಂದು ವಸತಿ ಶಾಲೆ 6ನೇ ತರಗತಿ ವಿದ್ಯಾರ್ಥಿಗಳ ಕೋರಿಕೆ ವರ್ಗಾವಣೆ ಹಾಗೂ 6ನೇ ಸುತ್ತಿನ ಸೀಟು ಹಂಚಿಕೆ ಕೌನ್ಸಿಲಿಂಗ್

**ಚಿತ್ರದುರ್ಗ:** ಜಿಲ್ಲೆಯಲ್ಲಿ ಕರ್ನಾಟಕ ವಸತಿ ಶಿಕ್ಷಣಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ, ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಶ್ರೀಮತಿ ಇಂಧಿರಾಗಾಂಧಿ ವಸತಿ ಶಾಲೆಗಳ 2024-25ನೇ ಸಾಲಿನ 6ನೇ ತರಗತಿ ವಿದ್ಯಾರ್ಥಿಗಳ ಕೋರಿಕೆ ವರ್ಗಾವಣೆ ಹಾಗೂ 6ನೇ ಸುತ್ತಿನ ಸೀಟು ಹಂಚಿಕೆ ಕಾರ್ಯಕ್ರಮ ಇದೇ ಸೆಪ್ಟೆಂಬರ್ 10ರಂದು ಹೊಳಲ್ಕೆರೆ ತಾಲ್ಲೂಕಿನ ಚಿತ್ರಹಳ್ಳಿ ವಸತಿ ಶಾಲೆಗಳ ಸಂಕೀರ್ಣದಲ್ಲಿ ನಡೆಯಲಿದೆ.

ಸೆ.10ರಂದು ಬೆಳಿಗ್ಗೆ 10.30 ರಿಂದ ಕೋರಿಕೆ ವರ್ಗಾವಣೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಕೌನ್ಸೆಲಿಂಗ್ ಹಾಗೂ ಮಧ್ಯಾಹ್ನ 2 ರಿಂದ 6ನೇ ಸುತ್ತಿನ ಆಯ್ಕೆ ಪಟ್ಟಿಯಲ್ಲಿನ ವಿದ್ಯಾರ್ಥಿಗಳಿಗೆ ಸೀಟು ಹಂಚಿಕೆ ಕೌನ್ಸೆಲಿಂಗ್ ನಡೆಸಲಾಗುವುದು. 6ನೇ ಸುತ್ತಿನ ಆಯ್ಕೆ ಪಟ್ಟಿ ಹಾಗೂ ಕಟ್ ಆಫ್ ಅಂಕಗಳ ವಿವರವನ್ನು ಎಲ್ಲಾ ಮೀಸಲಾತಿ ಶಾಲೆಗಳಲ್ಲಿ ಪ್ರಕಟಿಸಲಾಗಿದ್ದು, ಕಟ್ ಆಫ್ ಅಂಕಗಳ ಮೇಲಿರುವ ವಿದ್ಯಾರ್ಥಿಗಳು ಹಾಗೂ ಪೋಷಕರು ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ಪರೀಕ್ಷಾ ಪ್ರವೇಶಗಳ ಮೂಲ ಪ್ರತಿಗಳೊಂದಿಗೆ ಹಾಜರಾಗಲು ಸೂಚಿಸಿದೆ. ಅಭ್ಯರ್ಥಿಗಳಿಗೆ ಮೀಸಲಾತಿ ಹಾಗೂ ಮೆರಿಟ್ ಅನಿಸಾರ ಖಾಲಿ ಇರುವ ಸ್ಥಾನಗಳಿಗೆ ಕೌನ್ಸೆಲಿಂಗ್ ಮೂಲಕ ಪ್ರವೇಶ ನೀಡಲಾಗುವುದು.ಹೆಚ್ಚಿನ ಮಾಹಿತಿಗಾಗಿ ಪೋಷಕರು ತಮಗೆ ಸಮೀಪವಿರುವ ಕ್ರೈಸ್ ವಸತಿ ಶಾಲೆ ಪ್ರಾಂಶುಪಾಲರನ್ನು ಸಂಪರ್ಕಿಸಬಹುದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲ್ಲೂಕು ಮಟ್ಟದ ಪೋಷಣ್ ಮಾಸಾಚರಣೆ

» ದಾವಣಗೆರೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪೋಷಣ್ ಅಭಿಯಾನ ಯೋಜನೆಯಡಿ ಸೆಪ್ಟೆಂಬರ್ 2 ರಂದು ಆಲೂರು ಗ್ರಾಮ ಸಮುದಾಯ ಭವನದಲ್ಲಿ ಪೋಷಣ್ ಮಾಸಾಚರಣೆ ಅಂಗವಾಗಿ ಕಾರ್ಯಗಾರ ಏರ್ಪಡಿಸಲಾಯಿತು.

ಈ ವೇಳೆ ಶಿಶು ಅಭಿವೃದ್ಧಿ ಸಹಾಯಕ ಯೋಜನಾಧಿಕಾರಿ ಪ್ರಿಯದರ್ಶಿನಿ ಮಾತನಾಡಿ ಪೋಷಣ್ ಅಭಿಯಾನ ಯೋಜನೆಯು 2018 ರಲ್ಲಿ ಪ್ರಾರಂಭವಾಗಿದ್ದು. ಪ್ರತಿ ತಿಂಗಳು ಸೆಪ್ಟಂಬರ್ ಮಾಹೆಯ 1 ನೇ ತಾರೀಖಿನಿಂದ 30 ನೇ ತಾರೀಖಿನವರೆಗೆ ಪೋಷಣ್ ಮಾಸಾಚರಣೆ ಹೆಸರಿನಲ್ಲಿ ಪ್ರತಿ ವರ್ಷವು ಕಾರ್ಯಕ್ರಮ ಮಾಡುತ್ತಾ ಬಂದಿದ್ದೇವೆ, ಈ ಯೋಜನೆಯಡಿ ಬರುವ ಮಕ್ಕಳನ್ನು ತೂಕಮಾಡಿ ಬರುವ ಸ್ಯಾಮ್ ಮಕ್ಕಳನ್ನು ಎನ್.ಆರ್.ಸಿ ಕೇಂದ್ರಕ್ಕೆ 14 ದಿನ ದಾಖಲಿಸಿ ಮಗುವಿನ ಅಪೌಷ್ಠಿಕತೆಯಿಂದ ಪೌಷ್ಠಿಕತೆಗೆ ತರುತ್ತೇವೆ. ಹಾಗೂ ಸ್ತನ್ಯಪಾನ ಸಪ್ತಾಹ, ಸಮುದಾಯ ಆಧಾರಿತ ಚಟುವಟಿಕೆಗಳನ್ನು ಮಾಡುತ್ತೇವೆ, ಸುಕನ್ಯ ಸಮೃದ್ಧಿ ಯೋಜನೆ, ಬಾಲ್ಯವಿವಾಹ, ಪೋಕ್ಸೊ ಕಾಯ್ದೆ, ಲಿಂಗ ತಾರತಮ್ಯ ತಡೆ, ಹೆಣ್ಣು ಮಕ್ಕಳ ಸುರಕ್ಷತೆಯಲ್ಲಿ ಪೋಷಕರ ಪಾತ್ರ ಬಹುಮುಖ್ಯವಾಗಿದೆ



ಎಂದು ತಿಳಿಸಿದರು.

ಇಲಾಖೆಯ ಸವಲತ್ತುಗಳನ್ನು ಎಲ್ಲಾ ಫಲಾನುಭವಿಗಳು ಸದುಪಯೋಗ ಪಡಿಸಿಕೊಳ್ಳಬೇಕು ಮತ್ತು ಅಪೌಷ್ಠಿಕತೆ ಹೋಗಲಾಡಿಸಲು ಮಕ್ಕಳಿಗೆ ಪೌಷ್ಠಿಕ ಆಹಾರ, ವಿಟಮಿನ್ಸ್, ಹಣ್ಣುಗಳು, ತರಕಾರಿಗಳನ್ನು ಮಕ್ಕಳಿಗೆ ಕೊಡಬೇಕು ಎಂದು ತಿಳಿಸಿದರು.

ಜಿಲ್ಲಾ ಮಿಷನ್ ಶಕ್ತಿ ಯೋಜನೆ ಸಂಯೋಜಕರಾದ ಜಗದೀಶ್ ಭೇಟಿ ಬಚಾವೋ ಭೇಟಿ ಪಡಾವೋ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸೌಲಭ್ಯಗಳ ಬಗ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವೈದ್ಯಾಧಿಕಾರಿ ಸುಧಾ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಂಜಮ್ಮ, ಅಂಗನವಾಡಿ ಮೇಲ್ವಿಚಾರಕರಾದ ಗಂಗಮ್ಮ ಎ, ಪೋಷಣ್ ಸಮನ್ವಯಾಧಿಕಾರಿ ಸುನಿತಾ, ಸ್ತ್ರೀ ಶಕ್ತಿ ಸಂಘದ ಸದಸ್ಯರು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು,ಆಶಾ ಕಾರ್ಯಕರ್ತೆಯರು, ಪ್ರೌಢ ಶಾಲೆಯ ವಿದ್ಯಾರ್ಥಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ರೈಲ್ವೆ ಹಳಿಗಳ ಮೇಲೆ ಇತರೆ ವಸ್ತು ಇಡುವುದು, ರೈಲುಗಳಿಗೆ ಕಲ್ಲೆಸೆಯುವುದು ದಂಡನಾರ್ಹ ಅಪರಾಧ




**ದಾವಣಗೆರೆ:** ರೈಲುಗಳಿಗೆ ಕಲ್ಲು ಎಸೆಯುವುದು, ರೈಲ್ವೆ ಹಳಿಯ ಮೇಲೆ ಕಲ್ಲು ಅಥವಾ ಬೇರೆ ವಸ್ತುಗಳನ್ನು ಇಡುವುದು ತಪ್ಪು ಎಂದು ರೈಲ್ವೇ ರಕ್ಷಣಾ ದಳದ ಇನ್ಸ್‌ಪೆಕ್ಟರ್ ಬಿ.ಎನ್.ಕುಬೇರಪ್ಪ ತಿಳಿಸಿದರು. ಶ್ರೀರಾಮನಗರದಲ್ಲಿರುವ ಎಸ್.ಓ.ಜಿ ಕಾಲೋನಿಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಲಯನ್ಸ್ ಇಂಗ್ಲೀಷ್ ಮೀಡಿಯಂ ಶಾಲೆಯಲ್ಲಿ ರೈಲ್ವೆ ಸುರಕ್ಷಾ ಜಾಗೃತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತಾನಾಡಿದ ಅವರು ಎಲ್ಲಿ ಬೇಕೆಂದರಲ್ಲಿ ಹಳಿದಾಟುವುದು, ಇಂತಹ ಕೃತ್ಯಗಳಿಂದ ಜೀವ ಮತ್ತು ಆಸ್ತಿಯ ಹಾನಿಯಾಗುತ್ತದಲ್ಲದೆ ರೈಲ್ವೆ ಅಧಿನಿಯಮ 2003 ರ ಪ್ರಕಾರ ದಂಡನೀಯ ಅಪರಾಧವಾಗಿರುತ್ತದೆ ಎಂದು ತಿಳಿಸಿದರು. ಪಿಎಸ್ಐ ಲಕ್ಷ್ಮವ್ವ ಎನ್ ಪಾಟೀಲ್, ಮತ್ತು ಸಿಬ್ಬಂದಿಗಳು ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಸತ್ಯವತಿ, ಮುಖಂಡರಾದ ಕಲ್ಲೇಶಪ್ಪ, ಬಾತಿ ಶಿವಕುಮಾರ್, ಆಂಜಿನಪ್ಪ, ಎಲ್ ಜಯಪ್ಪ, ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಮತ್ತು ಕಾಲೋನಿಯ ನಾಗರಿಕರು ಸಾರ್ವಜನಿಕರು ಕಾರ್ಯಕ್ರಮದಲ್ಲಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T